# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 219 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 21–03–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 219 | RNI No: KARKAN/2023/88462 | KA/SK/CTA-874/2024-2026 | Chitradurga | Date: 21-03-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಅನುದಾನದ ಲಭ್ಯತೆ ಆಧರಿಸಿ ಸಿಸಿಕ್ಯಾಮರ ಅಳವಡಿಸಲು ನಗರಸಭೆ ನಿರ್ಣಯ 2
ಖಾಸಗಿ ಶಾಲೆಗಳ ವ್ಯಾಮೋಹ ಬಿಡಿ ಸರ್ಕಾರಿ ಶಾಲೆಗೆ ಮಕ್ಕಳನ್ನ ಕರೆ ತನ್ನಿ 3
ಮಕ್ಕಳ ವ್ಯಕ್ತಿತ್ವ ಸರಿಪಡಿಸಲು, ಪೋಷಕರಿಗೆ ಬೇಕಿದೆ ಜ್ಞಾನೌಷಧ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಸಕಾಲ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಹುದ್ದೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಖಾಲಿ ಇರುವ ಸಕಾಲ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಹುದ್ದೆಯನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮಾರ್ಚ್ 27 ಕೊನೆಯ ದಿನ. ಚಿತ್ರದುರ್ಗ ಜಿಲ್ಲಾ ಸಕಾಲ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಹುದ್ದೆಗೆ ಮಾಸಿಕ ರೂ.27,100ಗಳನ್ನು ನಿಗಧಿಪಡಿಸಿದ್ದು, ಬಿ.ಇ, ಬಿ.ಟೆಕ್, ಬಿಸಿಎ–ಕಂಪ್ಯೂಟರ್ ವಿಜ್ಞಾನ, ಮಾಹಿತಿ ವಿಜ್ಞಾನ, ಇಂಜಿನಿಯರಿಂಗ್ ಎಲೆಕ್ಟ್ರಾನಿಕ್ ಮತ್ತು ಕಮ್ಯೂನಿಕೇಷನ್ ಟೆಲಿಕಾಂ ವಿಷಯದಲ್ಲಿ ಪದವಿ ಪಡೆದಿರಬೇಕು. ಈ ವಿದ್ಯಾರ್ಹತೆ ಹೊಂದಿರುವ ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಇದೇ ಮಾರ್ಚ್ 27ರ ಸಂಜೆ 4 ಗಂಟೆಯೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿ, ಚಿತ್ರದುರ್ಗ ಜಿಲ್ಲೆ ಇಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಖುದ್ದು ಹಾಜರಾಗಿ ಪತ್ರಾಂಕಿತ ಕಚೇರಿ ಸಹಾಯಕರು, ಜಿಲ್ಲಾಧಿಕಾರಿಗಳ ಕಚೇರಿ, ಚಿತ್ರದುರ್ಗ ಜಿಲ್ಲೆ ಅವರಿಗೆ ಮುದ್ದಾಂ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಮಲ್ಟಿ ಕ್ಯೂಸಿನ್ ಕುಕ್ ಅಭ್ಯರ್ಥಿಗಳಿಂದ ಮರು ಅರ್ಜಿ ಆಹ್ವಾನ

» **ಚಿತ್ರದುರ್ಗ**

ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ ಆಯೋಜಿಸಲು ಮಲ್ಟಿ ಕ್ಯೂಸಿನ್ ಕುಕ್ ಅಭ್ಯರ್ಥಿಗಳಿಂದ ಮರು ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 29 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಪ್ರವಾಸೋದ್ಯಮ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಪ್ರವಾಸೋದ್ಯಮ/ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದ್ದು, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯಥಿಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಮೈಸೂರಿನ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ ಹಾಗೂ ಬೆಂಗಳೂರಿನ ಇನ್‌ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ ಅವರ ಮೂಲಕ ವಸತಿ ಸಹಿತ ತರಬೇತಿ ಕಾರ್ಯಕ್ರಮ ಜಾರಿಗೊಳಿಸಲು ಉದ್ದೇಶಿಸಲಾಗಿದೆ. 8ನೇ ತರಗತಿ ವಿದ್ಯಾರ್ಹತೆ ಹೊಂದಿದ 20 ರಿಂದ 45 ವರ್ಷ ವಯೋಮಿತಿಯವರಿಗೆ ಮಲ್ಟಿ ಕ್ಯೂಸಿನ್ ಕುಕ್‌ಗೆ ಸಂಬಂಧಿಸಿದಂತೆ 5 ತಿಂಗಳ ತರಬೇತಿ ಪಡೆಯಲು ಇಚ್ಛಿಸುವ ಅರ್ಹ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಇದೇ ಮಾರ್ಚ್ 19 ರಿಂದ ನಗರದ ಕೋಟೆ ಮುಂಭಾಗದ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ದ್ವಿ–ಪ್ರತಿಯಲ್ಲಿ ಮಾರ್ಚ್ 29ರ ಸಂಜೆ 4.30ರೊಳಗೆ ಕಚೇರಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆ ಕಚೇರಿಯ ದೂರವಾಣಿ ಸಂಖ್ಯೆ 08194–234466 ಗೆ ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಮಾನವ ಹಕ್ಕು ಆಯೋಗದ ಅಧ್ಯಕ್ಷರ ಜಿಲ್ಲಾ ಭೇಟಿ

» **ಚಿತ್ರದುರ್ಗ**

ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವು ಒದಗಿಸುವ ನಿಟ್ಟಿನಲ್ಲಿ 1993ರ ಮಾನವ ಹಕ್ಕುಗಳ ಸಂರಕ್ಷಣಾ ಅಧಿನಿಯಮದ ಅಡಿಯಲ್ಲಿ ಸ್ಥಾಪಿತವಾಗಿರುವ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಇದೇ ಮಾರ್ಚ್ 27ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ವಿಚಾರಣೆ ನಡೆಸಲು ಉದ್ದೇಶಿಸಿದೆ. ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಇತ್ಯರ್ಥಪಡಿಸಿ, ವಿಲೇ ಮಾಡಿ ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಈ ಸೌಲಭ್ಯದ ಸದುಪಯೋಗಪಡಿಸಿಕೊಳ್ಳಬಹುದು.

### ಒಳಮೀಸಲಾತಿ ಹೋರಾಟಕ್ಕೆ 3 ದಶಕ, ಪ್ರತ್ಯೇಕ ಮೀಸಲಾತಿ ಅಗತ್ಯ: ಮಾಜಿ ಸಚಿವ ಎಚ್.ಆಂಜನೇಯ

# ಒಳಮೀಸಲಾತಿ ಸಮುದಾಯದ ಏಕೈಕ ಆಸರೆ

» **ಚಿತ್ರದುರ್ಗ**

ಬಲಾಢ್ಯರಮಧ್ಯೆಕೂಲಿ–ಅನಕ್ಷರತೆಕಾರಣಕ್ಕೆ ಮೀಸಲು ಪಡೆಯುಲ್ಲಿ ವಿಫಲವಾ ಗಿರುವ ಮಾದಿಗ ಸಮುದಾಯಕ್ಕೆ ಒಳಮೀಸಲಾತಿಯೊಂದೇ ಏಕೈಕ ಆಸರೆ ಎಂದು ಎಂದು ಮಾಜಿ ಸಚಿವ, ಕೆಪಿಸಿಸಿ ಉಪಾಧ್ಯಕ್ಷ ಎಚ್. ಆಂಜನೇಯ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರಸುದ್ದಿಗೋಷ್ಠಿಯಲ್ಲಿಮಾತನಾಡಿ, ಜನಸಂಖ್ಯೆ ಆಧಾರಿತ ಒಳಮೀಸಲಾತಿ ಹೋರಾಟಕ್ಕೆ 30 ವರ್ಷದ ಇತಿಹಾಸ ಇದೆ. ಪ್ರತ್ಯೇಕ ಮೀಸಲಾತಿ ಕಲ್ಪಿಸಬೇಕು. ವರ್ಗೀಕರಣ ಮಾಡಬೇಕೆಂಬುದು ನಮ್ಮ ದಶಕದ ಒತ್ತಾಯ ಎಂದರು.

ಈ ಮಧ್ಯೆ ಸುಪ್ರೀಂ ಕೋರ್ಟ್ ಒಳಮೀಸಲಾತಿ ಜಾರಿಗೊಳಿಸುವ ಅಧಿಕಾರ ರಾಜ್ಯ ಸರ್ಕಾರಗಳಿಗೆ ಇದೆ ಎಂದು ತೀರ್ಪು ನೀಡಿದ್ದು, ಮಾದಿಗ ಸಮುದಾಯಕ್ಕೆ ಜೀವ ಬಂದಂತಾಗಿದೆ. ಜೊತೆಗೆ ತೆಲಂಗಾಣ, ಹರಿಯಾಣ, ಪಂಜಾಬ್, ಆಂಧ್ರದಲ್ಲಿ ಮೀಸಲಾತಿ ಜಾರಿಗೆ ಕ್ರಮಕೈಗೊಳ್ಳಲಾಗಿದೆ ಎಂದು ಹೇಳಿದರು.

ರಾಜ್ಯದಲ್ಲೂ ಈ ಸಂಬಂಧ ನ್ಯಾ.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗ ರಚಿಸಿ, ಎರಡು ತಿಂಗಳು ಗಡುವು ನೀಡಲಾಗಿತ್ತು. ಆದರೆ, ಗಡುವು ಅವಧಿ ಮುಗಿದರೂ ವರದಿ ಸಲ್ಲಿಕೆ ಆಗಿಲ್ಲ. ಆಯೋಗಕ್ಕೆ 40 ಇಲಾಖೆಗಳು ಸ್ಪಷ್ಟ ಅಂಕಿ–ಅಂಶ ನೀಡುವಲ್ಲೂ ನಿರ್ಲಕ್ಷ್ಯ ತೋರಿದ್ದು, ಜೊತೆಗೆ ದತ್ತಾಂಶ ಸಮಸ್ಯೆ



ಎದುರಾಗಿದೆ ಎನ್ನಲಾಗಿದೆ. ಆದ್ದರಿಂದ ಮಾದಿಗ ಸಮುದಾಯದಲ್ಲಿ ಆತಂಕ ಎದುರಾಗಿದೆ ಎಂದು ತಿಳಿಸಿದರು.

2011ರ ಗಣತಿ, ಸದಾಶಿವ ಆಯೋಗ, ಕಾಂತರಾಜ್ ಆಯೋಗದ ವರದಿಯಲ್ಲಿನ ಅಂಕಿ–ಅಂಶ ಹಾಗೂ ಈಗಾಗಲೇ ಸಂಗ್ರಹಿಸಿರುವ ಮಾಹಿತಿಯ ಆಧಾರದಡಿ ನಾಗಮೋಹನ್ ದಾಸ್ ಆಯೋಗದಿಂದ ವರದಿ ತಕ್ಷಣ ಪಡೆದು, ಒಳಮೀಸಲಾತಿ ಜಾರಿಗೆ ಕೂಡಲೇ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈಗಾಗಲೇ ಬಹಳಷ್ಟು ವಿಳಂಬ ಆಗಿದೆ. ಜೊತೆಗೆ ಮಾದಿಗ ಸಮುದಾಯ ಪ್ರತಿಭಟನೆ ಹಾದಿ ಹಿಡಿದಿದೆ. ಈ ವಿಷಯಲ್ಲಿ ಯಾವುದೇ ಕಾರಣಕ್ಕೂ ವಿಳಂಬ ನೀತಿ ಅನುಸರಿಸುವುದನ್ನು ನಾವು ಸಹಿಸುವುದಿಲ್ಲ ಎಂದು ಹೇಳಿದರು.

ಸಾಮಾಜಿಕನ್ಯಾಯದಹರಿಕಾರ,ನೊಂದ ಜನರಪರಮುಖ್ಯಮಂತ್ರಿಎಂದೇದೇಶದಲ್ಲಿ ಹೆಗ್ಗಳಿಕೆಗೆ ಪಾತ್ರರಾಗಿರುವ ಸಿದ್ದರಾಮಯ್ಯ, ಒಳಮೀಸಲಾತಿ ಜಾರಿ ವಿಷಯದಲ್ಲಿ ಯಾವುದೇ ಒತ್ತಡಕ್ಕೆ ಮಣಿಯದೆ ಜಾರಿಗೆ ದಿಟ್ಟ ನಿರ್ಧಾರ ಕೈಗೊಳ್ಳಬೇಕು. ಒಂದೊಮ್ಮೆ ವಿಳಂಬವಾದಲ್ಲಿ ನಾನು ಸೇರಿ ಬಹುತೇಕರು ಬೀದಿಗಿಳಿದು ಹೋರಾಟ ನಡೆಸುವ ಅನಿವಾರ್ಯತೆ ಎದುರಾಗಲಿದೆ ಎಂದು ತಿಳಿಸಿದರು.

ನುಡಿದಂತೆ ನಡೆಯುವ ಸಿದ್ದರಾಮಯ್ಯ ಎಂಬ ಜನಮೆಚ್ಚುಗೆಗೆ ಪಾತ್ರರಾಗಿರುವ ಸಿಎಂ, ಈಗಾಗಲೇ ಚುನಾವಣಾ ಪ್ರಣಾಳಿಕೆಯಲ್ಲಿಕೊಟ್ಟಭರವಸೆಯಂತೆಐದು ಗ್ಯಾರಂಟಿಗಳನ್ನುಜಾರಿಗೊಳಿಸಿದ್ದಾರೆ.ಅದೇ ರೀತಿ 6ನೇ ಗ್ಯಾರಂಟಿ ಎಂದು ಘೋಷಿಸಿದ್ದ ಮೀಸಲಾತಿ ವರ್ಗೀಕರಣವನ್ನು ಈ ತಿಂಗಳ ಅಂತ್ಯದೊಳಗೆ ಜಾರಿಗೊಳಿಸಬೇಕು. ಈ ಮೂಲಕ ಮಾದಿಗ ಹಾಗೂ ನೊಂದ ಸಮುದಾಯದ ಪ್ರೀತಿಗೆ ಪಾತ್ರರಾಗಬೇಕು ಎಂದು ಹೇಳಿದರು.

ಒಂದೊಮ್ಮೆ ಒತ್ತಡ ತಂತ್ರಗಳಿಗೆ ಮಣಿದು ವಿಳಂಬ ನೀತಿ ಅನುಸರಿಸುವುದನ್ನು ನಾವು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಆದ್ದರಿಂದ ನಮ್ಮ ಹಕ್ಕು ಒಳಮೀಸಲಾತಿ ವಿಷಯದಲ್ಲಿ ದಿಟ್ಟ ನಿರ್ಧಾರ ಕೈಗೊಳ್ಳಬೇಕು. ಜಾರಿಗೊಳಿಸಿದ ಬಳಿಕ ಏನಾದ್ರೂ ಸಮಸ್ಯೆಗಳು ಇದ್ದಲ್ಲಿ ಪರಿಶಿಷ್ಟ ಸಮುದಾಯಕ್ಕೆ ಸೀಮಿತಗೊಳಿಸಿ ಜಾತಿಗಣತಿ ನಡೆಸಲಿ. ಈಗ ಶಾಲಾ–ಕಾಲೇಜ್ ರಜೆ ಇರುವ ಕಾರಣಕ್ಕೆ ಶಿಕ್ಷಕ ವರ್ಗವನ್ನು ಸಮರ್ಥವಾಗಿ ಬಳಸಿಕೊಂಡು ಸರ್ವೆ ನಡೆಸಬಹುದು. ಆಧಾರ್ ಕಾರ್ಡ್ ಲಿಂಕ್ ಕೂಡ ಮಾಡಬಹುದು. ಈ ರೀತಿಯ ಸರ್ವೆ ಎಲ್ಲ ಸಮಸ್ಯೆಗಳಿಗೆ ಉತ್ತರ ಆಗಲಿದೆ ಎಂದರು.

ಮಗು ಅಳುವುದಕ್ಕಿಂತ ಮುಂಚಿತವಾಗಿಯೇ ಹಾಲುಣಿಸುವ ಹೃದಯವಂತಿಕೆ ಅಗತ್ಯ. ಈ ವಿಷಯದಲ್ಲಿ ಸಿದ್ದರಾಮಯ್ಯ ನೊಂದ ಜನರ ಪರವಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿ ದೃಢಪಡಿಸಿದ್ದಾರೆ.ಈಗಅವರಮುಂದಿರುವ ಒಳಮೀಸಲಾತಿ ವಿಷಯದಲ್ಲೂ ಅಮ್ಮನ ಹೃದಯದ ನಡೆ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.ಸದಾಶಿವ ಆಯೋಗ ಕಾಂಗ್ರೆಸ್ ಸರ್ಕಾರದಲ್ಲಿ ರಚನೆಗೊಂಡು, ಬಳಿಕ ಸಲ್ಲಿಕೆಯಾಯಿತು. ಆದರೆ, ಈ ವರದಿ ಕುರಿತು ಎಲ್ಲ ರಾಜಕೀಯ ಪಕ್ಷಗಳಿಗೆ ಒಂದು ರೀತಿ ಭೂತ, ನಾಗರಹಾವು ಭೀತಿ ಇದೆ. ಆದ್ದರಿಂದಲೇ ಆ ವರದಿಯನ್ನು ಯಾವುದೇ ಪಕ್ಷಗಳು ಮುಟ್ಟಲು ಹೋಗಲಿಲ್ಲ. ಬಿಜೆಪಿಯಂತೂ ವರದಿಯನ್ನೇ ತಿರಸ್ಕರಿಸಿತು ಎಂದು ಎಚ್. ಆಂಜನೇಯ ಬೇಸರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಲಿಡ್ಕರ್ ಮಾಜಿ ಅಧ್ಯಕ್ಷ ಓ.ಶಂಕರ್, ಜಿಪಂ ಮಾಜಿ ಸದಸ್ಯ ಬಿ.ಪಿ.ಪ್ರಕಾ□□ಮೂರ್ತಿ, ತಾಪಂ ಮಾಜಿ ಸದಸ್ಯ ಸಮರ್ಥರಾಯ ಇದ್ದರು.

# ರಕ್ತದಾನವೇ ಶ್ರೇಷ್ಠದಾನ: ನ್ಯಾ.ಎಂ.ವಿಜಯ್

» **ಚಿತ್ರದುರ್ಗ**

ರಕ್ತದಾನವೇ ಶ್ರೇಷ್ಠದಾನವಾಗಿದ್ದು, ರಕ್ತದಾನ ಮಾಡುವ ಮೂಲಕ ಇನ್ನೊಂದು ಜೀವ ಉಳಿಸಲು ಮುಂದಾಗಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ದವಳಗಿರಿ ಬಡಾವಣೆಯ ಗಾಯತ್ರಿ ಶಿವರಾಮ್ ಇನ್ನರ್ ವ್ಹೀಲ್ ಭವನದಲ್ಲಿ ಈಚೆಗೆ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಇನ್ನರ್ ವ್ಹೀಲ್ ಕ್ಲಬ್, ವಾಸವಿ ಕ್ಲಬ್ ಪೋರ್ಟ್ ಸಹಯೋಗದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಅಮೂಲ್ಯ ಜೀವ ಉಳಿಸಲು ಆರೋಗ್ಯವಂತರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ರಕ್ತದ ಅವಶ್ಯಕತೆಯಿಂದ ಬಳಲುವ ಜೀವ ಉಳಿಸಲು ಮುಂದಾಗಬೇಕು. ಮುಂದಿ ದಿನಗಳಲ್ಲಿ ಇನ್ನೂ ಹೆಚ್ಚು ರಕ್ತದಾನ ಶಿಬಿರಗಳು ಆಯೋಜಿಸುವಂತೆ ಸಲಹೆ ನೀಡಿದರು.

ಮಹಿಳಾ ದಿನಾಚರಣೆ ಅಂಗವಾಗಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಜೆ.ವೈಶಾಲಿ, ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಎಸ್.ಸುಧಾದೇವಿ, ಅಲ್ಪಸಂಖ್ಯಾತರ ಕಲ್ಯಾಣ



ಇಲಾಖೆ ಜಿಲ್ಲಾ ಅಧಿಕಾರಿ ರೇಖಾ, ಶಿಕ್ಷಣ ಸಂಯೋಜಕರಾದ ಸೈಯದ ಸಮೀರ ಅಪಷನ್, ಎಸ್‌ಜೆಎಂ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ಸಹಾಯಕ ಪ್ರಾಧ್ಯಾಪಕಿ ಡಾ.ನಾಜಿರಾ ಉನ್ನಿಸ, ಸ್ತ್ರೀರೋಗ ತಜ್ಞೆ ಡಾ.ರೂಪಶ್ರೀ, ಕೋಟೆ ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ರುಕ್ಕಮ್ಮ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರೆಡ್‌ಕ್ರಾಸ್ ಸಭಾಪತಿ ಗಾಯತ್ರಿ ಶಿವರಾಮ್, ವೀರಶೈವ ಅರ್ಬನ್ ಕೋ–ಅಪರೇಟಿವ್ ಸೊಸೈಟಿ ಅಧ್ಯಕ್ಷ ಶಿವಕುಮಾರ್ ಪಾಟೀಲ್, ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಪೂಜಾ ಪ್ರದೀಪ, ವಾಸವಿ ಕ್ಲಬ್ ಚಿತ್ರದುರ್ಗ ಪೋರ್ಟ್ ಅಧ್ಯಕ್ಷೆ ರಾಜೇಶ್ವರಿ ಸಿದ್ದರಾಮ್, ರೆಡ್ ಕ್ರಾಸ್ ಕಾರ್ಯದರ್ಶಿ ಮಜಹರ್ ಉಲ್ಲಾ, ಖಜಾಂಚಿ ವಿರೇಶ್, ನಿರ್ದೇಶಕರಾದ ಡಾ.ಮಧುಸೂದನ್ ರೆಡ್ಡಿ, ಶಿವರಾಮ್, ಸುರೇಶ್, ವೀರಭದ್ರಸ್ವಾಮಿ ಸೇರಿದಂತೆ ಮತ್ತಿತರರು ಇದ್ದರು. ಶಿಬಿರದಲ್ಲಿ ಮಹಿಳೆಯರು ಸೇರಿ ಒಟ್ಟು 18 ಜನ ರಕ್ತದಾನ ಮಾಡಿದರು. ರೆಡ್‌ಕ್ರಾಸ್ ಸಂಸ್ಥೆಯ ಉಪಸಭಾಪತಿ ಅರುಣ್ ಕುಮಾರ್ ರಕ್ತದಾನ ಮಾಡಿದರು.

## ಕಚೇರಿಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು ಕಲ್ಪಿಸಲು ಡಿಸಿ

**ಚಿತ್ರದುರ್ಗ:** ಚಿತ್ರದುರ್ಗ ಜಿಲ್ಲೆಯಲ್ಲಿ ಬೇಸಿಗೆಯಿಂದಾಗಿ ಅತಿ ಹೆಚ್ಚಿನ ಉಷ್ಣಾಂಶ ಇರುವುದರಿಂದ ಎಲ್ಲ ಇಲಾಖೆಗಳ ಕಚೇರಿಗಳಲ್ಲಿ



ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಅಧ್ಯಕ್ಷರಾದ ಟಿ.ವೆಂಕಟೇಶ್ ತಿಳಿಸಿದ್ದಾರೆ. ಭಾರತೀಯ ಹವಾಮಾನ ಇಲಾಖೆಯ ದೈನಂದಿನ ವರದಿಗಳ ಅನುಸಾರ ಚಿತ್ರದುರ್ಗ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಉಷ್ಣತೆಯು ಸರಾಸರಿ 38 ಡಿಗ್ರಿ ಸೆಲ್ಸಿಯಸ್ ರಿಂದ 40 ಡಿಗ್ರಿ ಸೆಲ್ಸಿಯಸ್ ವರೆಗೆ ಇದ್ದು, "ಬಿಸಿಗಾಳಿ" ಸಂದರ್ಭಗಳು ಮುಂದುವರೆದಿರುತ್ತದೆ. ಇಂತಹ ಸಂದರ್ಭಗಳಲ್ಲಿ ಸಾರ್ವಜನಿಕರು ವಹಿಸಬೇಕಾಗಿರುವ ಎಚ್ಚರಿಕೆ ಕ್ರಮಗಳ ಬಗ್ಗೆ ಮಾಧ್ಯಮಗಳ ಮುಖಾಂತರ ಮಾಹಿತಿಯನ್ನು ಕಾಲಕಾಲಕ್ಕೆ ನೀಡಲಾಗುತ್ತಿದೆ.ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರಸ್ತುತ ಹೆಚ್ಚು ಉಷ್ಣಾಂಶ ಇರುವುದರಿಂದ ಜನರು ನಿರ್ಜಲೀಕರಣಗೊಂಡು ಅನಾರೋಗ್ಯಕ್ಕೆ ಒಳಗಾಗುವ ಸಂಭವವಿರುವುದರಿಂದ, ನಿಯಮಿತವಾಗಿ ಶುದ್ಧ ಕುಡಿಯುವ ನೀರನ್ನು ಸೇವಿಸಿ ನಿರ್ಜಲೀಕರಣ ಉಂಟಾಗುವುದನ್ನು ತಪ್ಪಿಸಬಹುದಾಗಿರುತ್ತದೆ. ಆದ್ದರಿಂದ ಸರ್ಕಾರಿ ಕಚೇರಿಗಳಿಗೆ ಬರುವಂತಹ ಸಾರ್ವಜನಿಕರಿಗೆ ಅನುಕೂಲವಾಗುವಂತೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ತಪ್ಪದೆ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಲ್ಲಾ ಸರ್ಕಾರಿ ಕಚೇರಿಗಳ ಮುಖ್ಯಸ್ಥರಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಟಿ. ವೆಂಕಟೇಶ್ ಸುತ್ತೋಲೆ ಮೂಲಕ ಸೂಚನೆ ನೀಡಿದ್ದಾರೆ.

## ಪ್ರಮುಖ ಸುದ್ದಿ

# ಇಂದಿನಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ಆರಂಭ

### ಹೊಸದುರ್ಗ ತಾಲ್ಲೂಕಿನಲ್ಲಿ ಒಟ್ಟು 3407 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು 1873 ಬಾಲಕರು ಮತ್ತು 1534 ಬಾಲಕಿಯರು ಪರೀಕ್ಷೆ ಬರೆಯಲಿದ್ದಾರೆ

» **ಹೊಸದುರ್ಗ**

ಎಸ್.ಎಸ್.ಎಲ್.ಸಿ. ಪರೀಕ್ಷಾ ಮಂಡಳಿಯ ಅಂತಿಮ ವೇಳಾಪಟ್ಟಿಯಂತೆ ಮಾರ್ಚ್ 21 ರಿಂದ ಎಪ್ರಿಲ್ 4 ರವರೆಗೆ ನಡೆಯಲಿರುವ ಪರೀಕ್ಷೆಯಲ್ಲಿ ತಾಲ್ಲೂಕಿನಲ್ಲಿ ಒಟ್ಟು 3407 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದು ಇದರಲ್ಲಿ 1873 ಬಾಲಕರು ಮತ್ತು 1534 ಬಾಲಕಿಯರು ಪರೀಕ್ಷೆ ಬರೆಯಲಿದ್ದಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು 11 ಪರೀಕ್ಷಾ ಕೇಂದ್ರಗಳಲ್ಲಿ ವೆಬ್ ಕಾಸ್ಟಿಂಗ್ ಅಡಿಯಲ್ಲಿ ಪರೀಕ್ಷೆ ನಡೆಯುತ್ತಿದ್ದು, ತಾಲ್ಲೂಕಿನ ಎಲ್ಲಾ ವಿದ್ಯಾರ್ಥಿಗಳು ನಿರ್ಭಯದಿಂದ ಪರೀಕ್ಷೆಯನ್ನು ಎದುರಿಸುವುದಕ್ಕಾಗಿ ಈಗಾಗಲೇ 02 ಪೂರ್ವ ಸಿದ್ಧತಾ ಪರೀಕ್ಷೆಗಳನ್ನು ಶಾಲಾ ಹಂತದಲ್ಲೂ ಹಾಗೂ ಪರೀಕ್ಷಾ ಕೇಂದ್ರದಲ್ಲಿ ನಡೆಸಲಾಗಿದೆ. ಶಾಲಾ ಹಂತದಲ್ಲಿ ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರು ವಿಶೇಷ ತರಗತಿ ಹಾಗೂ ಗುಂಪು ಅಧ್ಯಯನ ಮಾಡುವುದರ ಮೂಲಕ ತಮ್ಮಲ್ಲಿ ಆತ್ಮವಿಶ್ವಾಸ ತುಂಬಿರುತ್ತಾರೆ. ಹಾಗಾಗಿ ಪ್ರಾಮಾಣಿಕವಾಗಿ ಪರೀಕ್ಷೆ ಎದುರಿಸಲು ಹಾಗೂ ಉತ್ತಮ ಫಲಿತಾಂಶ ಪಡೆಯಲು ಪ್ರಶ್ನೆ ಪತ್ರಿಕೆ ವಿಶ್ಲೇಷಣೆಯನ್ನು ಪುನರಾವರ್ತಿತ ತರಗತಿಗಳಲ್ಲಿ ನಡೆಸಿರುತ್ತಾರೆ ಹಾಗಾಗಿ ಯಾವುದೇ



ವಿದ್ಯಾರ್ಥಿಗಳಿಗೆ ಭಯಬೇಡ

ಧೈರ್ಯವಾಗಿ ಪರೀಕ್ಷೆಯನ್ನು ಎದುರಿಸಿ ಎಂದು ತಿಳಿಸಿದ್ದಾರೆ.

**ಆರೋಗ್ಯದ ಕಾಳಜಿ:** ಬೇಸಿಗೆಯ ತಾಪ ಏರುತ್ತಿದ್ದು ವಿದ್ಯಾರ್ಥಿಗಳು ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಅತ್ಯವಶ್ಯಕವಾಗಿದೆ ಹಾಗಾಗಿ ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯಿಂದ

ತಾಲ್ಲೂಕಿನ 11 ಪರೀಕ್ಷಾ ಕೇಂದ್ರಗಳಲ್ಲಿ ಆರೋಗ್ಯ ಇಲಾಖೆಯ ಸಹಕಾರವನ್ನು ಪಡೆದು ಆರೋಗ್ಯ ಕಾರ್ಯಕರ್ತರನ್ನು ಪ್ರತಿ ಪರೀಕ್ಷಾ ಕೇಂದ್ರಕ್ಕೆ ನಿಯೋಜಿಸಲು ಕ್ರಮವಹಿಸಿದೆ ಎಂದರು.

**ವಿದ್ಯುತ್ ಸೌಲಭ್ಯ:** ತಾಲ್ಲೂಕಿನ 11 ಪರೀಕ್ಷಾ ಕೇಂದ್ರಗಳಲ್ಲಿ ವೆಬ್ ಕಾಸ್ಟಿಂಗ್ ನಡೆಸಲು ತೊಂದರೆಯಾಗದಂತೆ ವಿದ್ಯುತ್ ಸರಬರಾಜು ಮಾಡಲು ಬೆಸ್ಕಾಂಗೆ ಪತ್ರ ಬರೆಯಲಾಗಿದ್ದು ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ಬಗ್ಗೆ ತಾಲ್ಲೂಕಿನ 11 ಪರೀಕ್ಷಾ ಕೇಂದ್ರಗಳಲ್ಲಿ ಮಾರ್ಚ್ 21 ರಿಂದ ಏಪ್ರಿಲ್ 04 ರವರೆಗೆ ಸುಗಮವಾಗಿ ಪರೀಕ್ಷೆಯನ್ನು ನಡೆಸಲು ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಅಕ್ರಮಗಳು ನಡೆಯದಂತೆ ತಡೆಗಟ್ಟಲು ಪೋಲಿಸ್ ಸಿಬ್ಬಂದಿ, ಸ್ಥಾನಿಕ ಜಾಗೃತ ದಳ, ಮೊಬೈಲ್ ಸ್ವಾಧೀನಾಧಿಕಾರಿಗಳು, ಪ್ರಶ್ನೆ ಪತ್ರಿಕೆ ಅಭಿರಕ್ಷಕರು ಹಾಗೂ ಪ್ರಶ್ನೆ ಪತ್ರಿಕೆ

ಸರಬರಾಜು ಮಾಡುವ ಮಾರ್ಗಾಧಿಕಾರಿಗಳನ್ನು ನಿಯೋಜಿಸಿದೆ ಎಂದು ಮಾಹಿತಿ ನೀಡಿರುವ ಅವರು ಪರೀಕ್ಷಾ ಭಯ ಬೇಡ ಎಂಬ ಕಿವಿ ಮಾತನ್ನ ವಿದ್ಯಾರ್ಥಿಗಳಿಗೆ ಹೇಳಿದ್ದಾರೆ.

## ಫಾಸ್ಟ್ ನ್ಯೂಸ್

### ನಾಳೆ ಉಚಿತ ನೇತ್ರ ತಪಾಸಣಾ, ಚಿಕಿತ್ಸಾ ಶಿಬಿರ

» **ಹೊಸದುರ್ಗ**

ಶಂಕರ ಕಣ್ಣಿನ ಆಸ್ಪತ್ರೆ ಶಿವಮೊಗ್ಗ,ಶ್ರೀ ಶಿರಡಿ ಸಾಯಿಬಾಬಾ ಟ್ರಸ್ಟ್,ಶ್ರೀ ಗಣೇಶ ಸದನ ಟ್ರಸ್ಟ್ ಹಾಗು ಮತ್ತಿತರೆ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಮಾರ್ಚ್ 22 ರಂದು ಶನಿವಾರ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪಟ್ಟಣದ ಹುಳಿಯಾರು ರಸ್ತೆಯಲ್ಲಿರುವ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಉಚಿತ ನೇತ್ರ ತಪಾಸಣಾ ಮತ್ತು ಚಿಕಿತ್ಸಾ ಶಿಬಿರವನ್ನ ಆಯೋಜಿಸಲಾಗಿದೆ ಎಂದು ಶ್ರೀ ಶಿರಡಿ ಸಾಯಿಬಾಬಾ ಟ್ರಸ್ಟ್ ಅಧ್ಯಕ್ಷ ಹಂಜಿಶಿವಸ್ವಾಮಿ ತಿಳಿಸಿದ್ದಾರೆ. ಶಿಬಿರದಲ್ಲಿ ಮುಖ್ಯವಾಗಿ ಮಕ್ಕಳಿಗೂ ಕೂಡ ಕಣ್ಣಿನ ತೊಂದರೆ ಇದ್ದಲ್ಲಿ ಆರಂಭದಲ್ಲೆ ಕಂಡು ಅದಕ್ಕೆ ತಕ್ಕಂತೆ ತಜ್ಞರ ಸಲಹೆ ಮತ್ತು ಚಿಕಿತ್ಸೆ ಬೇಕಾಗಿದ್ದಲ್ಲಿ ಉಚಿತವಾಗಿ ಮಾಡಲಾಗುವುದು ಎಂದರು. ಹೆಚ್ಚಿನ ಮಾಹಿತಿಗೆ 9008733470–9901706731 ಸಂಪರ್ಕಿಸಬಹುದು
ಡಿ.20–ಟಿಎಂ3

### ನಾಳೆ ಶ್ರೀ ಮಾರಿಕಾಂಭ ದೇವಿ ರಥೋತ್ಸವ

» **ಹೊಸದುರ್ಗ**

ತಾಲೂಕಿನ ಗಡಿ ಗ್ರಾಮವಾದ ಮೇಗಳಕೊಟ್ಟಿಗೆ ಗ್ರಾಮದಲ್ಲಿ ನೆಲೆಸಿರುವ ಶ್ರೀ ಮಾರಿಕಾಂಭ ದೇವಿಯ ರಥೋತ್ಸವವು ಮಾರ್ಚ್ 22 ರಂದು ಶನಿವಾರ ಮುಂಜಾನೆ ಜರುಗಲಿದೆ. ಮಾರ್ಚ್ 17 ರಿಂದ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಲಾಗಿದ್ದು ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮಗಳು ನಡೆಯುತ್ತಲಿವೆ, ಸುತ್ತಮುತ್ತಲಿನ ಗ್ರಾಮಗಳಾದ ಕಬ್ಬಳ. ಉಗಣೆಕಟ್ಟೆ, ಕೆಳಗಿನಕೊಟ್ಟಿಗೆ, ಎನ್.ಜಿ.ಹಳ್ಳಿ, ಮಾವಿನಕಟ್ಟೆ, ದೇವಿಗೆರೆ ಬೀಸನಹಳ್ಳಿ ಹಾಗೂ ನಾನಾ ಕಡೆಗಳಿಂದ ಭಕ್ತರು ಆಗಮಿಸಲಿದ್ದಾರೆ.ದೇವಿಯ ಮದುವಣಗಿತ್ತಿ ಶಾಸ್ತ್ರ ವಸ್ತ್ರಾಭರಣ ಅಲಂಕಾರ ಹೊಳೆಪೂಜೆ, ಅಗ್ನಿಕುಂಡ, ಬಾನು, ಬೇವಿನ ಸೀರೆ ಹಾಗೂ ಹೂವಿನ ಪಲ್ಲಕ್ಕಿ ಉತ್ಸವಗಳು ನಡೆದವು. ರಥೋತ್ಸವದ ಅಂಗವಾಗಿ ಶನಿವಾರ ಸಂಜೆ ಗ್ರಾಮದಲ್ಲಿ ಅನ್ನಸಂತರ್ಪಣೆಯನ್ನ ಆಯೋಜನೆ ಮಾಡಲಾಗಿದ್ದು ಅಪಾರ ಭಕ್ತ ಸಮೂಹ ರಥೋತ್ಸವ ಸಮಯದಲ್ಲಿ ದೇವಿಯ ದರ್ಶನ ಪಡೆಯಲಿದ್ದಾರೆ. ಜೋತೆಗೆ ಸೋಮನ ಕುಣಿತ ಎಲ್ಲರನ್ನು ರಂಜಿಸಲಿದೆ.ಮಾರ್ಚ್ 21 ರಂದು ಶುಕ್ರವಾರ ಕೋಣನ ಉತ್ಸವ ಹಾಗೂ ಆನೆ ಉತ್ಸವ ಜರುಗಲಿದ್ದು ಮಾರ್ಚ್ 22 ರಂದು ಶನಿವಾರ ರಥೋತ್ಸವ, ಮಾರ್ಚ್ 23 ರಂದು ಭಾನುವಾರ ಹಾಲು ಪಲ್ಲಕ್ಕಿ ಉತ್ಸವ, ಮಾರ್ಚ್ 24 ರಂದು ಸೋಮವಾರ ಕಂಕಣ ವಿಸರ್ಜನೆ ಮಾಡುವ ಮೂಲಕ ಅಮ್ಮನವರು ಮಂಚ ಏರುವುದು ಮತ್ತು ಪೂಜಾ ಕಾರ್ಯಗಳು ನಡೆಯಲಿವೆ.

### ಅನಾಮದೇಯ ಶವ ಪತ್ತೆ: ಗುರುತಿಗೆ ಮನವಿ

» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕಿನ ಹೊನ್ನೇಕೆರೆ ಗುಡ್ಡದಲ್ಲಿ ಸುಮಾರು 65–70 ವರ್ಷದ ಪುರುಷನ ಶವ ಪತ್ತೆಯಾದ ಕುರಿತು ಮಾರ್ಚ್ 19ರಂದು ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅನಾಮಧೇಯ ವ್ಯಕ್ತಿಯು 5.3 ಅಡಿ ಎತ್ತರ, ಸಣಕಲು ಮೈಕಟ್ಟು, ದುಂಡು ಮುಖ, ತಲೆಯಲ್ಲೆ ಸುಮಾರು 02 ಇಂಚು ಬಿಳಿ ಕೂದಲು, ಕಪ್ಪು ಮೈ ಬಣ್ಣ, ಶವವು ಸಂಪೂರ್ಣಗಾಗಿ ಕೊಳೆತು ಹೋಗಿದ್ದು, ಮೂಳೆಗಳು ಕಾಣುತ್ತಿರುತ್ತವೆ. ಶವದ ಮೈಮೇಲೆ ಬಿಳಿ ಅಂಗಿ ಮತ್ತು ನೀಲಿ, ಬಿಳಿ ಮತ್ತು ಕಪ್ಪು ಗೀರುಳ್ಳ ಟವೆಲ್ ಧರಿಸಿರುತ್ತಾರೆ. ಮೃತ ಅನಾಮಧೇಯ ವ್ಯಕ್ತಿಯ ಕುರಿತು ಮಾಹಿತಿ ತಿಳಿದುಬಂದಲ್ಲಿ ಹೊಳಲ್ಕೆರೆ ಪೊಲೀಸ್ ಠಾಣೆ 08191–275233, 9480803151 ಗೆ ಸಂಪರ್ಕಿಸಬಹುದು ಎಂದು ಹೊಳಲ್ಕೆರೆ ಪೊಲೀಸ್ ಠಾಣೆಯ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 22579 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ; 81 ಕೇಂದ್ರಗಳಲ್ಲಿ ಇಂದಿನಿಂದ



» **ದಾವಣಗೆರೆ**

2024–25 ಸಾಲಿನ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯು ಮಾರ್ಚ್ 21 ರಿಂದ ಏಪ್ರಿಲ್ 4 ರವರೆಗೆ ಜರುಗಲಿವೆ. ಹೊಸದಾಗಿ ಒಟ್ಟು 21704 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು ಇದರಲ್ಲಿ 10587 ಬಾಲಕ, 11117 ಬಾಲಕಿಯರು ಇದ್ದಾರೆ. ಇದಲ್ಲದೇ ಖಾಸಗಿ 194, ಖಾಸಗಿ ಪುನರಾವರ್ತಿತ 41 ಹಾಗೂ ಪುನರಾವರ್ತಿತ 640 ವಿದ್ಯಾರ್ಥಿಗಳು ಸೇರಿ 22579 ವಿದ್ಯಾರ್ಥಿಗಳು ಒಟ್ಟು 81 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯುವರು. ಜಿಲ್ಲೆಯಲ್ಲಿ 475 ಪ್ರೌಢಶಾಲೆಗಳಿದ್ದು ಇದರಲ್ಲಿ 135 ಸರ್ಕಾರಿ, 166 ಅನುದಾನಿತ, 169 ಅನುದಾನ ರಹಿತ ಪ್ರೌಢಶಾಲೆಗಳಿವೆ.

**ಕೇಂದ್ರಗಳ ವಿವರ;** ಚನ್ನಗಿರಿ 16, ದಾವಣಗೆರೆ ಉತ್ತರ 14, ದಾವಣಗೆರೆ ದಕ್ಷಿಣ 17, ಹರಿಹರ 12, ಹೊನ್ನಾಳಿ 11, ಜಗಳೂರು 11 ಸೇರಿ 81 ಕೇಂದ್ರಗಳಿವೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಟಿವಿ ಅಳವಡಿಸಿದ್ದು ವೆಬ್ ಕಾಸ್ಟಿಂಗ್ ಇರಲಿದೆ.

# ಅಕ್ರಮ ಗಣಿಗಾರಿಕೆ, ಕ್ರಷರ್ ಸ್ಥಗಿತಕ್ಕೆ ಆಗ್ರಹ

» **ದಾವಣಗೆರೆ**

ಹೊನ್ನಾಳಿ – ನ್ಯಾಮತಿ ಅವಳಿ ತಾಲೂಕಿನ ಆರುಂಡಿ ಗ್ರಾಮದಲ್ಲಿ ಕಲ್ಲು ಕ್ವಾರೆಗಳಿಂದ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಹೋರಾಟ ನಡೆಸಿದ ಹಿನ್ನೆಲೆಯಲ್ಲಿ ದಾವಣಗೆರೆ ಅಪರ ಜಿಲ್ಲಾಧಿಕಾರಿ ಪಿ. ಎನ್. ಲೋಕೇಶ್, ಉಪವಿಭಾಗಾಧಿಕಾರಿ ಅಭಿಷೇಕ್, ರಶ್ಮಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿದರು.

ಸ್ಥಳಕ್ಕೆ ಭೇಟಿ ಮಾಡಿ ಜನರ ಸಂಕಷ್ಟ ಆಲಿಸಿ ಪರಿಶೀಲನೆ ನಡೆಸಿದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು, ಕೂಡಲೇ ಅಕ್ರಮ ಗಣಿಗಾರಿಕೆ, ಕಾನೂನು ಬಾಹಿರ ಕ್ರಷರ್ ಸ್ಥಗಿತಗೊಳಿಸುವಂತೆ ಒತ್ತಾಯಿಸಿದರು.

ಈ ವೇಳೆ ಮಾತನಾಡಿದ ಜಿ. ಬಿ. ವಿನಯ್ ಕುಮಾರ್ ಅವರು, ಊರಿನ ಸಮಸ್ಯೆಯನ್ನು ಅಧಿಕಾರಿಗಳು ಹತ್ತಿರದಿಂದ ಗಮನಿಸಿದ್ದಾರೆ. ಜನರ ಸಮಸ್ಯೆಗಳು ಅನುಭವಕ್ಕೆ ಬರುತ್ತಿವೆ. ನಾನು ಹಲವು ಶಾಲೆಗಳಿಗೆ ಭೇಟಿ ನೀಡಿದ್ದೇನೆ. ಆದ್ರೆ, ಇಲ್ಲಿ ಬರುತ್ತಿರುವ ಧೂಳು ಹೆಚ್ಚಾಗಿದೆ. ಮಕ್ಕಳು ಈ ವಾತಾವರಣದಲ್ಲಿ ಪಾಠ ಕಲಿಯಲು ಆಗದು.

ಯಾವುದೇ ರಸ್ತೆಯಾದರೂ ಅಲ್ಲಿಂದ ನೂರು ಮೀಟರ್ ಆಚೆ 100 ಮೀಟರ್ ಆಚೆ ಇರಬೇಕು. ಈ ಬಗ್ಗೆ ಪರಿಶೀಲಿಸಬೇಕು. ಜನರು ತೊಂದರೆಗಳ ಬಗ್ಗೆ ಹೇಳಿದಾಗ ಸೇಫ್ ಜೋನ್ 500 ಮೀಟರ್ ದೂರದವರೆಗೆ ಇರಬೇಕು. ಇದೆಲ್ಲಾ ಕಾನೂನು ಬದ್ಧವಾಗಿ ನೀಡಬೇತು.



2011ರಲ್ಲಿ ಕ್ರಷರ್ ಆಕ್ಟ್ ಅಡಿ ಜನರ ಸಮಸ್ಯೆಗಳಿಗೆ ಸ್ಪಂದಿಸಲೇಬೇಕಾಗುತ್ತದೆ. ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕೆಂಚಿಕೊಪ್ಪ ಗ್ರಾಮ ಪಂಚಾಯಿಯ ಆರುಂಡಿ ಗ್ರಾಮದ ವ್ಯಾಪ್ತಿಯಲ್ಲಿನ ಕಲ್ಲಿನ ಕ್ವಾರೆ ಕ್ರಷರ್ ಹಾಗೂ ಗಣಿಗಾರಿಕೆ ಕಾನೂನು ನಿಯಮಬಾಹಿರವಾಗಿ ನಡೆಯುತ್ತಿದ್ದು, ಗ್ರಾಮದ ರಸ್ತೆ ಹಾಳಾಗಿದೆ. ಧೂಳಿನಿಂದ ಗ್ರಾಮಸ್ಥರಿಗೆ ಅನಾನುಕೂಲವಾಗಿದೆ. ರೈತರು ಬೆಳೆದ ಬೆಳೆಗಳು ಹಾಳಾಗಿವೆ. ನೀರು ಕುಡಿಯಲು ಯೋಗ್ಯವಲ್ಲದಂತಾಗಿದೆ. ಅಂತರ್ಜಲ ಮಟ್ಟವೂ ಕುಸಿದಿದ್ದು, ಜನರಿಗೆ ಕುಡಿಯುವ ನೀರಿನ ಸಮಸ್ಯೆ ತಲೆದೋರಿದೆ. ಗ್ರಾಮದ ದೇವಸ್ಥಾನಗಳು ಹಾಗೂ ಆರುಂಡಿ ಗ್ರಾಮದ ವಾಸದ ಮನೆಗಳ ಗೋಡೆಗಳು ಬಿರುಕು ಬಿಟ್ಟಿವೆ. ಮನೆಗಳಲ್ಲಿ ವಾಸ ಮಾಡುವುದೇ ಕಷ್ಟದಂತಿದೆ ಎಂದು ತಿಳಿಸಿದರು.

ಗ್ರಾಮದಲ್ಲಿ ನಡೆಸುತ್ತಿರುವ ಪ್ರತಿಯೊಂದು ಕ್ವಾರೆಗಳಲ್ಲಿ ಯಾವುದೇ ತಡೆಗೋಡೆ ಇಲ್ಲ. ಮರಗಿಡಗಳನ್ನು ಬೆಳೆಸಿಲ್ಲ. ತಂತಿ ಬೇಲಿ ಹಾಕುವುದೂ ಸೇರಿದಂತೆ ಯಾವುದೇ ಮುಂಜಾಗ್ರತಾ ಕ್ರಮ ತೆಗೆದುಕೊಂಡಿಲ್ಲ. ಊರಿಗೆ ಹತ್ತಿರವಾಗಿ ಕ್ರಷರ್, ಗಣಿಗಾರಿಕೆ ನಡೆಯುತ್ತಿರುವುದರಿಂದ ಸಮಸ್ಯೆಗಳು ಹೆಚ್ಚಾಗುತ್ತಲೇ ಇವೆ.ಆರುಂಡಿ ಗ್ರಾಮದ ಶಾಲಾ ಮಕ್ಕಳಿಗೆ ಕಲ್ಲುಗಳನ್ನು ಪುಡಿ ಮಾಡಲು ಬಳಸುವ ಸ್ಫೋಟಕಗಳಿಂದ ಶ್ರವಣ ಶಕ್ತಿ ಕುಂದಿದ್ದು ಮತ್ತು ಧೂಳಿನಿಂದ ಉಸಿರಾಟದ ತೊಂದರೆಯೂ ಆಗುತ್ತಿದೆ. ಅನೇಕ ಕಾಯಿಲೆಗಳು, ಚರ್ಮರೋಗಗಳು ಬಾಧಿಸುತ್ತಿವೆ. ಪೋಷಕರು ಆತಂಕಕ್ಕೆ ಒಳಗಾಗಿದ್ದಾರೆ. ಆದ್ದರಿಂದ ಅಧಿಕಾರಿಗಳು ಕೂಡಲೇ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಆರುಂಡಿ ಗ್ರಾಮ ಕೃಷಿ ಅವಲಂಬಿತ ಪ್ರದೇಶ. ಇಲ್ಲಿರುವ ಕ್ವಾರಿಗಳಿಂದ ಬರುತ್ತಿರುವ ಧೂಳಿನ ಕಣಗಳು ಬೆಳಗಳ ಮೇಲೆ ಬಿದ್ದು ಬೆಳೆದ ಫಸಲು ಕೈಗೆ ಬರದಂಥ ಸ್ಥಿತಿ ನಿರ್ಮಾಣವಾಗಿದೆ. ಉಪಕಸುಬು ಪಶುಸಂಗೋಪನೆಯ ಮೇಲೂ ನೇರ ಪರಿಣಾಮ ಬೀರಿದೆ. ಕೂಡಲೇ ಕ್ರಷರ್ ನಿಲ್ಲಿಸುವಂತೆ ಈ ಹಿಂದೆ ಗ್ರಾಮದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಲ್ಲು ಕೋರೆಯ ಲಾರಿಗಳು, ಹಿಟಾಚಿಗಳನ್ನೂ ಊರಿನ ಮುಂದೆ ನಿಲ್ಲಿಸಿ ಪ್ರತಿಭಟನೆ ಮಾಡಿದ್ದಾರೆ.

ಪ್ರತಿಭಟನೆಗೆ ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಸದಸ್ಯರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತಹಶಿಲ್ದಾರ್ ಅವರನ್ನು ಗ್ರಾಮಕ್ಕೆ ಕರೆಯಿಸಿ ಮನವಿ ನೀಡಿದ್ದಾರೆ. ಆದರೂ ಅಧಿಕಾರಿಗಳು ಕ್ರಮ ತೆಗೆದುಕೊಳ್ಳದಿರುವುದು ಬೇಸರದ ಸಂಗತಿ ಎಂದು ವಿನಯ್ ಕುಮಾರ್ ತಿಳಿಸಿದರು.

ಸ್ವತಂತ್ರವಾಗಿ, ಶುದ್ಧ ಪರಿಸರದಲ್ಲಿ ಬದುಕುವ ಹಕ್ಕು ಪ್ರತಿಯೊಬ್ಬ ಭಾರತೀಯನ ಕನಸು. ಆದ್ರೆ, ಆರುಂಡಿ ಗ್ರಾಮಸ್ಥರಿಗೆ ಮರೀಚಿಕೆಯಾಗಿದೆ. ಶುದ್ಧ ಮತ್ತು ಆರೋಗ್ಯಕರವಾದ ಪರಿಸರದಲ್ಲಿ ಗ್ರಾಮಸ್ಥರು, ಮಕ್ಕಳು, ಜಾನುವಾರುಗಳು ಜೀವಿಸಬೇಕಾದರೆ ಕ್ರಷರ್ ನಿಲ್ಲಬೇಕು ಎಂದು ಅವರು ಆಗ್ರಹಿಸಿದರು.

ಗ್ರಾಮಕ್ಕೆ ಭೇಟಿ ನೀಡಿದ ವಿನಯ್ ಕುಮಾರ್ ಅವರು ಬಿರುಕುಬಿಟ್ಟ ಮನೆಗಳು, ಮಕ್ಕಳಿಗೆ ಆಗುತ್ತಿರುವ ತೊಂದರೆ, ಹಾಳಾಗಿರುವ ಬೆಳೆಗಳನ್ನು ವೀಕ್ಷಿಸಿದರು. ಗ್ರಾಮದ ಮುಖಂಡರು, ಮಹಿಳೆಯರು, ಯುವಕರು, ಯುವತಿಯರು ಈ ವೇಳೆ ಹಾಜರಿದ್ದರು.

# ಕೊಳಾಳು ಕಾಟಲಿಂಗೇಶ್ವರಸ್ವಾಮಿ, ಕದುರೆ ನರಸಿಂಹಸ್ವಾಮಿಯ ದೊಡ್ಡದೇವರ ಜಾತ್ರೆ



» **ಚಿತ್ರದುರ್ಗ**

ಶಿಕ್ಷಣದಿಂದ ಮಾತ್ರ ಕಂದಾಚಾರ, ಮೂಢನಂಬಿಕೆಗಳಿಂದ ಹೊರ ಬರಲು ಸಾಧ್ಯ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಇಂದಿರಾ ಕಿರಣ್‌ಕುಮಾರ್ ಯಾದವ್ ತಿಳಿಸಿದರು.

ಹೊಳಲ್ಕೆರೆ ತಾಲ್ಲೂಕು ತಾಳ್ಯ ಹೋಬಳಿ ಕೊಳಾಳು ಕದುರೆದೇವರಹಟ್ಟಿಯಲ್ಲಿ ನೆಲೆಸಿರುವ ಕಾಟಲಿಂಗೇಶ್ವರಸ್ವಾಮಿ ಹಾಗೂ ಕದುರೆ ನರಸಿಂಹಸ್ವಾಮಿಯ ದೊಡ್ಡ ದೇವರ ಜಾತ್ರಾ ಮಹೋತ್ಸವ ಉದ್ಘಾಟಿಸಿ ಮಾತನಾಡಿದರು.

ಜಾತ್ರೆಗಳನ್ನು ಅದ್ದೂರಿಯಾಗಿ ಆಚರಿಸಿ ದುಂದು ವೆಚ್ಚ ಮಾಡುವ ಬದಲು ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡುವುದು ಮುಖ್ಯ. ಶಿಕ್ಷಣದಿಂದ ಮಾತ್ರ ಪ್ರತಿಯೊಬ್ಬರ ಜೀವನದಲ್ಲಿ ಯಶಸ್ಸು ಕಂಡುಕೊಳ್ಳಬಹುದಲ್ಲದೆ. ಮೌಢ್ಯದಿಂದ ದೂರವಿರಲು ನೆರವಾಗಲಿದೆ. ಪ್ರತಿಭಾವಂತ ಮಕ್ಕಳನ್ನು ಪುರಸ್ಕರಿಸುವುದರಿಂದ ಇತರೆ ಮಕ್ಕಳಿಗೆ ಉತ್ತೇಜನ ನೀಡಿದಂತಾಗುತ್ತದೆಂದು ಹೇಳಿದರು.

ಅಹೋಬಲ ನರಸಿಂಹಸ್ವಾಮಿ ಸೇವಾ ಸಮಿತಿ ಟ್ರಸ್ಟ್ ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ ಜಾತ್ರೆ ಎನ್ನುವುದು ಮನುಷ್ಯರಲ್ಲಿ ಜಾಗೃತಿಯನ್ನು ಮೂಡಿಸುವಂತಿರಬೇಕು. ಕೇವಲ ಪೂಜೆ ಪುನಸ್ಕಾರಕ್ಕಷ್ಟೆ ಜಾತ್ರೆ ಸೀಮಿತವಾಗಿರಬಾರದು. ಮೂಢನಂಬಿಕೆ, ಕಂದಾಚಾರಗಳಿಂದ ದೂರವಿರುವ ಎಚ್ಚರಿಕೆಯನ್ನು ಜಾತ್ರೆಗಳ ಮೂಲಕ ಮೂಡಿಸಿಕೊಳ್ಳಬೇಕೆಂದರು.

ಪ್ರೌಢಶಾಲೆಯ ನಿವೃತ್ತ ಮುಖ್ಯ ಶಿಕ್ಷಕ ಗೋವಿಂದಪ್ಪ ಮಾತನಾಡುತ್ತ ಜಾತ್ರೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿಗಳನ್ನು ಸನ್ಮಾನಿಸುತ್ತಿರುವುದು ನಿಜಕ್ಕೂ ವಿದ್ಯಾರ್ಥಿಗಳಲ್ಲಿನ ಪ್ರತಿಭೆಗೆ ಸಂದ ಗೌರವ. ಇದರಿಂದ ಬೇರೆ ಮಕ್ಕಳು ಹೆಚ್ಚಿನ ಅಂಕಗಳನ್ನು ಗಳಿಸಲು ಉತ್ತೇಜಿಸಿದಂತಾಗುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಿರಣ್‌ಕುಮಾರ್ ಯಾದವ್ ಅಧ್ಯಕ್ಷತೆ ವಹಿಸಿದ್ದರು.ಗೌರಮ್ಮ ತಿಮ್ಮಯ್ಯ, ಚಿತ್ತಪ್ಪ ಎಂ. ನಿವೃತ್ತ ಪ್ರಾಧ್ಯಾಪಕ ಕೆ.ಪರಮೇಶ್ವರಪ್ಪ, ಚಿತ್ರದುರ್ಗ ಬೆಸ್ಕಾಂ ಕಾರ್ಯಪಾಲಕ ಅಭಿಯಂತರ ತಿಮ್ಮರಾಯ, ಕುವೆಂಪು ವಿಶ್ವವಿದ್ಯಾನಿಲಯದ ಪ್ರೊ. ಬಿ.ಜೆ.ಗಿರೀಶ, ಪೊಲೀಸ್ ಇನ್ಸ್‌ಪೆಕ್ಟರ್ ಲಕ್ಷ್ಮಿಕಾಂತರಾಜು, ಕೆ.ಚಿಕ್ಕಣ್ಣ, ಗಿರಿಯಪ್ಪ, ಆರ್.ಮಂಜುನಾಥ, ಸಾಹುಕಾರ್ ಚಿತ್ತಪ್ಪ, ಎಂ.ಜಯಪ್ಪಬಿ.ಡಿ.ತಿಪ್ಪೇಸ್ವಾಮಿ, ಈರಪ್ಪ, ಕದುರಪ್ಪ ಇವರುಗಳು ವೇದಿಕೆಯಲ್ಲಿದ್ದರು.

## ನಗರದ ರಾಜಬೀದಿಗಳಲ್ಲಿ ಸಾಗಿದ ಕಣಿವೆಮಾರಮ್ಮನ ಮೆರವಣಿಗೆ



» **ಚಿತ್ರದುರ್ಗ**

ನಗರ ಪೊಲೀಸ್ ಠಾಣೆ ಆವರಣದಲ್ಲಿರುವ ಕಣಿವೆಮಾರಮ್ಮನ ಜಾತ್ರೆ ಆರಂಭಗೊಂಡಿದ್ದು, ಗುರುವಾರ ಬೆಳಿಗ್ಗೆ ಅಲಂಕೃತ ಸಾರೋಟಿನಲ್ಲಿ ಕಣಿವೆಮಾರಮ್ಮನ ಮೆರವಣಿಗೆ ರಾಜಬೀದಿಗಳಲ್ಲಿ ಸಾಗಿತು.ನಗರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಉಮೇಶ್‌ಬಾಬುರವರು ಮೆರವಣಿಗೆಗೆ ಚಾಲನೆ ನೀಡಿದರು.ವಿವಿಧ ಬಗೆಯ ಹೂವು ಹಾಗೂ ಹಾರಗಳಿಂದ ಸಿಂಗರಿಸಿದ್ದ ಕಣಿವೆಮಾರಮ್ಮನ ಮೆರವಣಿಗೆ ಮದಕರಿವೃತ್ತದ ಮೂಲಕ ಕರುವಿನಕಟ್ಟೆ ಸರ್ಕಲ್, ಏಕನಾಥೇಶ್ವರಿ ಪಾದಗುಡಿ, ಉಚ್ಚಂಗಿಯಲ್ಲಮ್ಮ ದೇವಸ್ಥಾನದ ಮುಂಭಾಗ, ಆನೆಬಾಗಿಲಿನಿಂದ ದೇವಸ್ಥಾನ ತಲುಪಿತು.

ಡೊಳ್ಳು ಕುಣಿತ, ತಮಟೆ, ಸೋಮನಕುಣಿತ, ಪೂರ್ಣಕುಂಭ ಹೊತ್ತ ಮಹಿಳೆಯರು ಮೆರವಣಿಗೆಯಲ್ಲಿದ್ದರು. ಸೈಬರ್ ಕ್ರೈಂ ಡಿ.ವೈ.ಎಸ್ಪಿ. ಉಮೇಶ್ ಈಶ್ವರ್‌ನಾಯ್ಕ, ಸಶಸ್ತ್ರ ಮೀಸಲು ಪಡೆಯ ಡಿ.ವೈ.ಎಸ್ಪಿ. ಗಣೇಶ್ ಸೇರಿದಂತೆ ನಿವೃತ್ತ ಪೊಲೀಸ್ ಅಧಿಕಾರಿಗಳು ಮೆರವಣಿಗೆ ಸಂದರ್ಭದಲ್ಲಿದ್ದರು.

## ಪ್ರಮುಖ ಸುದ್ದಿ

# ಅನುದಾನದ ಲಭ್ಯತೆ ಆಧರಿಸಿ ನಗರದ ವಿವಿಧೆಡೆ ಸಿಸಿಕ್ಯಾಮರ ಅಳವಡಿಸಲು ನಗರಸಭೆ ನಿರ್ಣಯ

» **ಚಳ್ಳಕೆರೆ**

ನಗರಸಭೆಯ ತುರ್ತು ಕೌನ್ಸಿಲ್ ಸಭೆ ಪ್ರಭಾರ ಅಧ್ಯಕ್ಷೆ ಸುಮಭರಮಣ್ಣ ಅಧ್ಯಕ್ಷತೆಯಲ್ಲಿ ನಡೆದಿದ್ದು, ಚಳ್ಳಕೆರೆ ನಗರದಲ್ಲಿ ಸಿಸಿ ಕ್ಯಾಮರ, ಅಪರಾಧ ತಡೆ ಹಿನ್ನೆಲೆಯಲ್ಲಿ ಸೂಚನಾಫಲಕ ಅನಾವರಣ, ವಾರದಸಂತೆ ದಿನವಹಿ ಮಾರುಕಟ್ಟೆ ಸುಂಕವಸೂಲಾತಿ ಹಾಗೂ ಬೇಸಿಗೆ ಹಿನ್ನೆಲೆಯಲ್ಲಿ ಕುಡಿಯುವ ನೀರು, ಸ್ವಚ್ಚತೆ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಪ್ರಾರಂಭದಲ್ಲಿ ಪೌರಾಯುಕ್ತ ಎಚ್.ಜಿ.ಜಗರೆಡ್ಡಿ ಎಲ್ಲರನ್ನೂ ಸ್ವಾಗತಿಸಿ, ಪೊಲೀಸ್ ಇಲಾಖೆ ನಗರದ ಆಯಕಟ್ಟು ಪ್ರದೇಶಗಳಲ್ಲಿ ಆಗಾಗಾ ನಡೆಯುತ್ತಿರುವ ದರೋಡೆ, ಕಳ್ಳತನ ಪ್ರಕರಣ ಪತ್ತೆಗೆ ಅವಶ್ಯವಿರುವ ಸಿಸಿ ಕ್ಯಾಮರ ಅಳವಡಿಕೆ, ಅಪಘಾತಗಳನ್ನು ನಿಯಂತ್ರಿಸಲು ಸೂಚನಾ ಫಲಕ ಮುಂತಾದ ವಿಷಯಗಳ ಬಗ್ಗೆ ಚರ್ಚೆ ನಡೆಸಲು ಸಭೆ ಆಯೋಜಿಸಿದ್ದು, ಸಭೆಯಲ್ಲಿ ಭಾಗವಹಿಸಿರುವ ಪ್ರಭಾರ ಅಧ್ಯಕ್ಷೆ ಹಾಗೂ ಎಲ್ಲಾ ಸದಸ್ಯರಿಗೂ ಸ್ವಾಗತಕೋರಿ ನಗರಸಭೆಯ ಹಿತದೃಷ್ಟಿಯಿಂದ ಸದಸ್ಯರು ಸೂಕ್ತ ಸಲಹೆ ಸೂಚನೆ ನೀಡುವಂತೆ ಮನವಿ ಮಾಡಿದರು.



ಪ್ರಾರಂಭದಲ್ಲೇ ಸಿಸಿ ಕ್ಯಾಮರ ಅಳವಡಿಕೆ ಕುರಿತಂತೆ ಕಳೆದ 2014–15ರ ಸಭೆಯಲ್ಲಿ 6ಲಕ್ಷ ಹಣ ಮೀಸಲಿಟ್ಟಿದ್ದು, ಅದು ಕಾರ್ಯಗತವಾಗಿಲ್ಲ, ಮತ್ತೆ ಅದೇ ವಿಚಾರ ಸಭೆಯಲ್ಲಿ ಪ್ರಸ್ತಾಪಿಸಿರುವುದು ಸರಿಯಲ್ಲವೆಂದು ಹಿರಿಯ ಸದಸ್ಯ ಎಸ್. ಜಯಣ್ಣ, ಟಿ.ಶಿವಕುಮಾರ್, ಸಿ.ಶ್ರೀನಿವಾಸ್, ಸಿ.ಎಂ.ವಿಶುಕುಮಾರ್, ಎಂ.ನಾಗವೇಣಿ, ನಿರ್ಮಲ, ಸಾಕಮ್ಮ, ಪಾಲಮ್ಮ, ಮುಂತಾದವರು ಆಕ್ಷೇಪಿಸಿದರು. ಆಡಳಿತ ಪಕ್ಷದ ಸದಸ್ಯ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಮಾಹಿತಿ ನೀಡಬೇಕೆಂದರು.

ಪೌರಾಯುಕ್ತರ ಪರವಾಗಿ ಮಾಹಿತಿ ನೀಡಿದ ವ್ಯವಸ್ಥಾಪಕ ಲಿಂಗರಾಜು, 2014–15ನೇ ಸಾಲಿನಲ್ಲಿ ಸಿಸಿ ಕ್ಯಾಮರ ಅಳವಡಿಸಲು ಒಟ್ಟು 77 ಲಕ್ಷ ಹಣ ಅವಶ್ಯಕತೆ ಇರುವ ಬಗ್ಗೆ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿ ಕಳಿಸಲಾಗಿತ್ತು. ಆದರೆ, ಜಿಲ್ಲಾಧಿಕಾರಿಗಳಿಂದ ಯಾವುದೇ ಅನುಮೋದನೆ ದೊರಕದ ಕಾರಣ ವಿಷಯವನ್ನು ಕೈಬಿಡಲಾಯಿತು ಎಂದರು. ನಂತರ ಚರ್ಚೆ ನಡೆಸಿ ನಗರಸಭೆಯಲ್ಲಿ ಲಭ್ಯವಿರುವ ಅನುದಾನವನ್ನು ಉಪಯೋಗಿಸಿಕೊಂಡು ಶಾಸಕರ ಅನುದಾನ ಪಡೆದು ಸಿಸಿ ಕ್ಯಾಮರ ಅಳವಡಿಸುವಂತೆ ನಿರ್ಧಾರ ಕೈಗೊಳ್ಳಲಾಯಿತು.

ಖಾಸಗಿಬಸ್ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯವಿಲ್ಲವೆಂದು ಬೇಸರ ವ್ಯಕ್ತಪಡಿಸಿದ ನಗರಸಭಾ ಸದಸ್ಯೆ ಸುಜಾತಪಾಲಯ್ಯ, ಸೌಲಭ್ಯ ನೀಡದೆ ಸುಂಕವಸೂಲಾತಿ ಸರಿಯಲ್ಲವೆಂದರು. ಇದಕ್ಕೆ ಉತ್ತರಿಸಿದ ಪೌರಾಯುಕ್ತ ಸೌಲಭ್ಯ ಕಲ್ಪಿಸಿ ಹರಾಜು ಪ್ರಕ್ರಿಯೆ ನಡೆಸಲಾಯಿತು ಎಂದರು. ನಗರ ವ್ಯಾಪ್ತಿಯಲ್ಲಿ ಸ್ವಚ್ಚತೆ ಮಾಯವಾದ ಬಗ್ಗೆ ಆರೋಗ್ಯ ನಿರೀಕ್ಷಕರು ಸೂಕ್ತ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲವೆಂದು ಸದಸ್ಯರು ಅಸಮದಾನ ಹೊರಹಾಕಿದರು. ಸರಿಪಡಿಸುವ ಭರವಸೆ ಪೌರಾಯುಕ್ತರು ನೀಡಿದರು.

ಪ್ರಭಾರ ಅಧ್ಯಕ್ಷೆ ಸುಮಭರಣ್ಣ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಕವಿತಾಬೋರಯ್ಯ, ಆರ್.ಮಂಜುಳಾ, ಚಳ್ಳಕೆರೆಯಪ್ಪ, ಪ್ರಶಾಂತ್‌ಕುಮಾರ್, ಹೊಯ್ಸಳಗೋವಿಂದ, ವೈ.ಪ್ರಕಾಶ್ ಮುಂತಾದವರು ಸಭೆಯಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಮಹಾನಿಯರ ಜಯಂತಿ ಪೂರ್ವ ಸಭೆ ಮಾ.24ಕ್ಕೆ

» ದಾವಣಗೆರೆ

ಪ್ರಸಕ್ತ ಸಾಲಿನ 118ನೇ ಡಾ.ಬಾಬು ಜಗಜೀವನರಾಂ ಜಯಂತಿ ಹಾಗೂ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ರವರ 134ನೇ ಜಯಂತಿ ಆಚರಣಾ ಪೂರ್ವಭಾವಿ ಸಭೆಯನ್ನು ಮಾ.24 ರ ಸಂಜೆ 4 ಕ್ಕೆ ಮುಂದೂಡಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್ ತಿಳಿಸಿದ್ದಾರೆ.

### ಹರಾಜು ಪ್ರಕ್ರಿಯೆ ಮುಂದೂಡಿಕೆ

» ದಾವಣಗೆರೆ

ಹರಿಹರ ತಾಲ್ಲೂಕಿನ ಕ್ರೀಡಾಂಗಣದ ಆವರಣದಲ್ಲಿರುವ ವಾಣಿಜ್ಯ ಮಳಿಗೆಗಳ ಹರಾಜು ಪ್ರಕ್ರಿಯನ್ನು ಕಾರಣಾಂತರಗಳಿಂದ ಏಪ್ರಿಲ್ 1 ರಂದು ಬೆಳಿಗ್ಗೆ 11 ಗಂಟೆಗೆ ಮುಂದೂಡಲಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಬಿಎಸ್‌ಎನ್‌ಎಲ್ ಫ್ರಾಂಚೈಸಿಗಳು ರಜಾ ದಿನ ಕಾರ್ಯನಿರ್ವಹಣೆ

» ದಾವಣಗೆರೆ

ದಾವಣಗೆರೆ ಮತ್ತು ಚಿತ್ರದುರ್ಗ ಪ್ರದೇಶಗಳ ಎಲ್ಲಾ ಬಿಎಸ್‌ಎನ್‌ಎಲ್ ಗ್ರಾಹಕರು ಪ್ರಸಕ್ತ ಹಣಕಾಸು ವರ್ಷ ಮುಕ್ತಾಯವನ್ನು ಪರಿಗಣಿಸಿ, ಎಲ್ಲಾ ಬಿಎಸ್‌ಎನ್‌ಎಲ್ ಸಿಎಸ್‌ಸಿ ಗಳನ್ನು ಮಾರ್ಚ್ 23 ಮತ್ತು ಮಾರ್ಚ್ 30 ರಂದು ಸಾಮಾನ್ಯ ಕೆಲಸದ ಸಮಯದೊಂದಿಗೆ ತೆರೆದಿಡಲು ನಿರ್ಧರಿಸಲಾಗಿದೆ. ಎಲ್ಲಾ ಬಿಎಸ್‌ಎನ್‌ಎಲ್ ಗ್ರಾಹಕರು ಈ ಸೇವೆಗಳನ್ನು ಬಳಸಿಕೊಳ್ಳಬೇಕೆಂದು ಜನರಲ್ ಮ್ಯಾನೇಜರ್ ತಿಳಿಸಿದ್ದಾರೆ.

### ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್ ಅವರಅಧ್ಯಕ್ಷತೆಯಲ್ಲಿ ಮಾರ್ಚ್ 25 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯಿತಿಯ ಎಸ್.ಎಸ್.ಮಲ್ಲಿಕಾರ್ಜುನ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜಿ.ಪಂ. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಪಾಲಿಕೆ ಅಧಿಕಾರಿ, ಸಿಬ್ಬಂದಿ ಹಣ ನೀಡುವಂತೆ ಬೇಡಿಕೆ ಇಟ್ಟರೆ ದೂರು ದಾಖಲಿಸಿ

» ದಾವಣಗೆರೆ

ರಾಜೀವ್ ಗಾಂಧಿ ವಸತಿ ನಿಗಮ, ಮನೆ ವಸತಿ ಯೋಜನೆಗಳ ಅನುಸಾರ ವಸತಿ-ರಹಿತರನ್ನು ಗುರುತಿಸಿ ಮಾಹಿತಿಯನ್ನು ಭೌತಿಕವಾಗಿ ಸಂಗ್ರಹಿಸಿ ನಿಗದಿತ ನಮೂನೆಯಲ್ಲಿ ತುರ್ತಾಗಿ ವರದಿ ಸಲ್ಲಿಸಲು ಮಹಾನಗರಪಾಲಿಕೆಯ ಕರ ವಸೂಲಿಗಾರರು, ವಿಷಯ ನಿರ್ವಾಹಕರು, ಕಂದಾಯ ನಿರೀಕ್ಷಕರು ಹಾಗೂ ಪಾಲಿಕೆಯ ಇತರೆ ಅಧಿಕಾರಿ, ಸಿಬ್ಬಂದಿಗಳನ್ನು ನೇಮಿಸಲಾಗಿದೆ.

ಈ ಅಧಿಕಾರಿ, ನೌಕರರು ದಾವಣಗೆರೆ ಮಹಾನಗರಪಾಲಿಕೆ ವ್ಯಾಪ್ತಿಯ ಬೇಡಿಕೆ ಸಮೀಕ್ಷೆ ಸರ್ವೆ ಪ್ರಕಾರ 29379 ನಿವೇಶನ, ವಸತಿ ರಹಿತರು ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಆನ್‌ಲೈನ್ ತಂತ್ರಾಂಶದಲ್ಲಿ ಅರ್ಜಿಯನ್ನು ಸಲ್ಲಿಸಿದ ಫಲಾನುಭವಿಗಳ ಮನೆ ಮನೆ ಭೇಟಿ ಮಾಡಿ ಮಾಹಿತಿ ಸಂಗ್ರಹಿಸುತ್ತಿದ್ದು, ಫಲಾನುಭವಿಗಳು ಮಾಹಿತಿ ಮಾತ್ರ ನೀಡಬೇಕು. ಸರ್ಕಾರದ ಅಧಿಸೂಚನೆಯಂತೆ ಸಂಪೂರ್ಣ ಪಾರದರ್ಶಕವಾಗಿ ನಡೆಯುತ್ತಿದ್ದು, ಒಂದು ವೇಳೆ ಮಾಹಿತಿ ಜೊತೆಗೆ ಪಾಲಿಕೆಯ ಅಧಿಕಾರಿ, ನೌಕರರು ಹಾಗೂ ಯಾವುದೇ ಮಧ್ಯವರ್ತಿಗಳು ಹಣ ನೀಡುವಂತೆ ಬೇಡಿಕೆ ಇಟ್ಟರೆ, ಅಂತಹವರ ವಿರುದ್ಧ ತಕ್ಷಣ ಹತ್ತಿರದ ಪೊಲೀಸ್ ಠಾಣೆಗೆ ಹೋಗಿ ದೂರು ದಾಖಲಿಸುವಂತೆ ತಿಳಿಸಿದ್ದಾರೆ. ಒಂದು ವೇಳೆ ಫಲಾನುಭವಿಗಳು ಅಧಿಕಾರಿ, ನೌಕರರು, ಮಧ್ಯವರ್ತಿಗಳಿಗೆ ಹಣ ನೀಡಿ ಮೋಸ ಹೋದಲ್ಲಿ ಅದಕ್ಕೆ ಪಾಲಿಕೆಯು ಜವಾಬ್ದಾರರಾಗುವುದಿಲ್ಲ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

### ವಿಶ್ವ ಜಲದಿನ ಅಂಗವಾಗಿ ಪರಿಸರ ಜಾಥಾ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿ, ನೆಹರು ಯುವ ಕೇಂದ್ರ ಹಾಗೂ ನಗರಸಭೆ ಸಹಯೋಗದಲ್ಲಿ ವಿಶ್ವ ಜಲ ದಿನ-2025ರ ಕಾರ್ಯಕ್ರಮದ ಅಂಗವಾಗಿ ಇದೇ ಮಾರ್ಚ್ 21ರಂದು ಬೆಳಿಗ್ಗೆ 8.30ಕ್ಕೆ ನಗರದ ಗಾಂಧಿ ವೃತ್ತ ಸಮೀಪದ ನೀಲಕಂಠೇಶ್ವರ ದೇವಸ್ಥಾನದಿಂದ ಒನಕೆ ಓಬವ್ವ ವೃತ್ತದವರೆಗೆ ಪರಿಸರ ಜಾಥಾ ಆಯೋಜಿಸಲಾಗಿದೆ.

# ಹೆಣ್ಣು ಮಕ್ಕಳು ಕೀಳರಿಮೆ ಬಿಟ್ಟು ಶಕ್ತಿ ಸಾಮರ್ಥ್ಯ ಅರಿತಾಗ ಸ್ವಾವಲಂಭಿಯಾಗಿ ಬದುಕಬಹುದು

» ಚಿತ್ರದುರ್ಗ

ಹೆಣ್ಣು ಮಕ್ಕಳು ತಮ್ಮಲ್ಲಿರುವ ಕೀಳರಿಮೆಯನ್ನು ಬಿಟ್ಟು ಶಕ್ತಿ ಸಾಮರ್ಥ್ಯವನ್ನು ಅರಿತಾಗ ಸ್ವಾವಲಂಭಿಯಾಗಿಬದುಕಬಹುದುಎಂದು ಬಜ್ ಇಂಡಿಯಾ ಟ್ರಸ್ಟ್, ಬಜ್-ವಿಮೆನ್ ಕಾರ್ಯಕ್ರಮ ವ್ಯವಸ್ಥಾಪಕ ಬೆಂಗಳೂರಿನ ಜಿ.ಎಸ್.ವೆಂಕಟೇಶ್ ಕರೆ ನೀಡಿದರು.

ಬಜ್ ಇಂಡಿಯಾ ಟ್ರಸ್ಟ್, ಬಜ್-ವಿಮೆನ್ ಚಿತ್ರದುರ್ಗ ಸಹಯೋಗದೊಂದಿಗೆ ತ.ರಾ.ಸು.ರಂಗಮಂದಿರದಲ್ಲಿ ಗುರುವಾರ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ಗೆಳತಿ ಸಮಾಗಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹಳ್ಳಿ ಹಳ್ಳಿಗೆ ಹೋಗಿ ಹೆಣ್ಣು ಮಕ್ಕಳನ್ನು ಒಂದು ಕಡೆ ಸೇರಿಸಿ ತರಬೇತಿ ಕೊಡುವುದು ಕಷ್ಟದ ಕೆಲಸ. ರಾಜ್ಯದ ಹದಿಮೂರು ಜಿಲ್ಲೆಗಳಲ್ಲಿ 6 ವರೆ ಲಕ್ಷ ಮಹಿಳೆಯರಿಗೆ ತರಬೇತಿ ನೀಡಲಾಗಿದೆ. 2012 ರಿಂದ ಇಲ್ಲಿಯವರೆಗೂ ನಮ್ಮ ಸಂಸ್ಥೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಉಪ ನಿರ್ದೇಶಕರು, ಸಿ.ಡಿ.ಪಿ.ಓ.ಗಳು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಸಹಕಾರ ನೀಡುತ್ತ ಬರುತ್ತಿದ್ದಾರೆ. ಅಡುಗೆ ಮನೆಗಷ್ಟೆ ಮಹಿಳೆಯರು ಸೀಮಿತ ಎನ್ನುವ ತಪ್ಪು ಕಲ್ಪನೆ ಬೇಡ. ನಮ್ಮ ಸಂಸ್ಥೆಯಿಂದ ಸ್ಫೂರ್ತಿ ತರಬೇತಿ ನೀಡಿರುವುದರಿಂದ ಸಣ್ಣ ಪುಟ್ಟ ವ್ಯಾಪಾರಗಳನ್ನು ಮಾಡುವುದರ ಜೊತೆ ಹಣ ಉಳಿತಾಯ ಮಾಡುವ ಜಾಗೃತಿ ಮೂಡಿದೆ ಎಂದು ಹೇಳಿದರು.





ನಮ್ಮದು ಹಣ ಕೊಡುವ ಸಂಸ್ಥೆಯಲ್ಲ. ಸ್ವಾವಲಂಭಿಗಳಾಗಿ ಬದುಕುವ ಜ್ಞಾನ ನೀಡುತ್ತೇವೆ. ಹದಿನೆಂಟು ಸಾವಿರ ಹಳ್ಳಿಗಳಿಂದ ಹದಿನೈದು ಸಾವಿರ ಹೆಣ್ಣು ಮಕ್ಕಳು ಸ್ವಯಂ ಸೇವಕಿಯರಾಗಿ ಕೆಲಸ ಮಾಡುತ್ತಿದ್ದಾರೆ. ಹಳ್ಳಿಗಳಲ್ಲಿ ಜೇನುಗೂಡು ಸಭೆಗಳನ್ನು ನಡೆಸುವಷ್ಟರ ಮಟ್ಟಿಗೆ ಮಹಿಳೆಯರು ಬುದ್ದಿವಂತರಾಗಿದ್ದಾರೆ. ಕಲುಷಿತ ಆಹಾರ ಸೇವನೆಯಿಂದ ಪ್ರತಿಯೊಬ್ಬರು ರಕ್ತದೊತ್ತಡ, ಸಕ್ಕರೆ ಕಾಯಿಲೆಯಿಂದ ಹೃದಯಾಘಾತಕ್ಕೆ ಬಲಿಯಾಗುವುದು ಸರ್ವೆ ಸಾಮಾನ್ಯವಾಗಿದೆ. ಎರಡು ವರ್ಷಗಳಿಂದ ಸಂಸ್ಥೆಗೆ ಶಕ್ತಿ ಫಂಡ್ ನೀಡಲು ಸಿದ್ದರಾಗಿದ್ದೀರಿ. ಈ ಹಣ ಬಳಸಿಕೊಂಡು ಹೊಸ ಜಿಲ್ಲೆಗಳಲ್ಲಿ ಮಹಿಳೆಯರಿಗೆ ತರಬೇತಿ ನೀಡುತ್ತಿದ್ದೇವೆ. ಕೆಲವು ಹೊರ ದೇಶಗಳಲ್ಲಿಯೂ ಬಜ್ ಇಂಡಿಯಾ ಸಂಸ್ಥೆ ತನ್ನ ಕಾರ್ಯವ್ಯಾಪ್ತಿಯನ್ನು ವಿಸ್ತರಿಸಿದೆ ಎಂದರು.ಮಳೆ ನೀರು ಕೊಯ್ಲು ತಜ್ಞ ಎನ್.ಜೆ.ದೇವರಾಜರೆಡ್ಡಿ ಮಾತನಾಡುತ್ತ ಬಜ್ ಇಂಡಿಯಾ ಸಂಸ್ಥೆ ಚಿತ್ರದುರ್ಗ ಜಿಲ್ಲೆಯಲ್ಲಿ ಇಷ್ಟೊಂದು ಮಹಿಳಾ ಪಡೆಯನ್ನು ಕಟ್ಟಿರುವುದು ಸುಲಭದ ಕೆಲಸವಲ್ಲ. ಮಾ.22 ವಿಶ್ವ ಜಲ ದಿನಾಚರಣೆ ಆಚರಿಸುತ್ತಿರುವುದರಿಂದ ಮಹಿಳೆಯರು ನೀರಿನ ಮಹತ್ವ ಅರಿಯಬೇಕು. ನೀರು ಮತ್ತು ನಾರಿಯರಿಗೆ ಸಾವಿರಾರು ವರ್ಷಗಳ ಅವಿನಾಭಾವ ಸಂಬಂಧವಿದೆ ಎಂದು ಹೇಳಿದರು.ಮಳೆ ನೀರು ವ್ಯರ್ಥವಾಗಿ ಹರಿದು ಹೋಗಲು ಬಿಡದೆ ಹೇಗೆ ಸಂಗ್ರಹಿಸಿ ಮಿತವಾಗಿ ಬಳಸಬೇಕು ಎನ್ನುವುದರ ಕುರಿತು ಮಹಿಳೆಯರಲ್ಲಿ ಅರಿವಿರಬೇಕು. ಇತ್ತೀಚಿನ ದಿನಗಳಲ್ಲಿ ಎಲ್ಲಾ ನೀರು ಕಲುಷಿತಗೊಂಡಿರುವುದರಿಂದ ಸದ್ಯದ ಪರಿಸ್ಥಿತಿಯಲ್ಲಿ ಪರಿಶುದ್ದವಾದ ನೀರು ಯಾವುದಾದರೂ ಇದ್ದರೆ ಅದು ಮಳೆ ನೀರು ಮಾತ್ರ. ಮಳೆ ನೀರು ಕೊಯ್ಲಿಗೆ ಹೆಚ್ಚಿನ ಒತ್ತು ಕೊಟ್ಟು ಅಡುಗೆಗೆ ಬಳಸಿದರೆ ಆರೋಗ್ಯದ ಮೇಲೆ ಒಳ್ಳೆಯ ಪರಿಣಾಮ ಬೀರುತ್ತದೆ. ಮನೆಯ ಛಾವಣಿ ಮೇಲೆ ಬೀಳುವ ಮಳೆ ನೀರನ್ನು ಸಂಗ್ರಹಿಸಿಟ್ಟುಕೊಂಡರೆ ಒಳ್ಳೆಯದು ಎಂದು ತಿಳಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಎ.ಸಿ.ಡಿ.ಪಿ.ಓ. ಮಂಜುಳ ಮಾತನಾಡಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವುದು ಮುಖ್ಯ. ಸ್ತ್ರೀಶಕ್ತಿ ಗುಂಪುಗಳನ್ನು ರಚಿಸುವುದು ಸುಲಭವಲ್ಲ. ಸ್ವ-ಉದ್ಯೋಗದ ಮೂಲಕ ದುಡಿಮೆಯ ದಾರಿ ಕಂಡುಕೊಂಡು ಸ್ವಾವಲಂಭಿಗಳಾಗಿ ಬದುಕಲು ಬಜ್ ಇಂಡಿಯಾ ಸಂಸ್ಥೆ ಶ್ರಮಿಸುತ್ತಿದೆ. ಇದರ ಜೊತೆ ನಮ್ಮ ಇಲಾಖೆ ಕೂಡ ಕೈಜೋಡಿಸುತ್ತಿದೆ ಎಂದು ಹೇಳಿದರು. ಎನ್.ಆರ್.ಎಂ.ಎಲ್.ನ ಯೋಗೇಶ್, ಸಾಹಿತಿ ಶರಿಫಾಬಿ, ಬಸವೇಶ್ವರ ವಿದ್ಯಾಸಂಸ್ಥೆಯ ಅಧ್ಯಕ್ಷೆ ಪ್ರಭಾವತಿ ಶಂಕರಪ್ಪ ವೇದಿಕೆಯಲ್ಲಿದ್ದರು.

# ಖಾಸಗಿ ಶಾಲೆಗಳ ವ್ಯಾಮೋಹ ಬಿಡಿ ಸರ್ಕಾರಿ ಶಾಲೆಗೆ ಮಕ್ಕಳನ್ನ ಕರೆ ತನ್ನಿ: ಸ್ವಾಮೀಜಿ

» ಹೊಸದುರ್ಗ

ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಗಿಂತ ಯಾವುದರಲ್ಲೂ ಸಹಾ ಕಡಿಮೆ ಇಲ್ಲ, ಪೋಷಕರು ಅರ್ಥ ಮಾಡಿಕೊಳ್ಳಬೇಕು, ದುಪ್ಪಟ್ಟು ಹಣ ಕೊಟ್ಟು ಖಾಸಗಿ ಶಾಲೆಗಳಿಗೆ ತಮ್ಮ ಮಕ್ಕಳನ್ನ ಸೇರಿಸುವುದನ್ನ ಕೈ ಬಿಡಿ, ಸರ್ಕಾರಿ ಶಾಲೆಗೆ ತಮ್ಮ ಮಕ್ಕಳನ್ನ ಕರೆ ತನ್ನಿ ಎಂದು ಬ್ರಹ್ಮವಿದ್ಯಾನಗರ ಭಗೀರಥ ಪೀಠದ ಶ್ರೀ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಪೋಷಕರಿಗೆ ಕಿವಿ ಮಾತು ಹೇಳಿದರು.

ತಾಲೂಕಿನ ಬಿ.ವಿ.ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಹೊಸದುರ್ಗ ಟೌನ್ ಕ್ಲಸ್ಟರ್‌ನ ಶಾಲಾ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಆಶೀರ್ವಚನ ನೀಡಿದರು.ಸರ್ಕಾರಿ ಶಾಲೆಗಳೆಂದರೆ ಅಸಡ್ಡೆ ಮಾಡಬೇಡಿ, ಇಲ್ಲಿ ಉತ್ತಮ ಗುಣಮಟ್ಟದ ಭೋಧನೆ ಇರುತ್ತದೆ, ನುರಿತ ಶಿಕ್ಷಕರುಗಳು ಇರುತ್ತಾರೆ, ಈ ಶಾಲೆಯ ಮಕ್ಕಳು ಎಷ್ಟು ಚೆನ್ನಾಗಿ ಶ್ಲೋಕಗಳನ್ನ ಹೇಳುತ್ತಾರೆ, ಇಲ್ಲಿನ ಎಲ್ಲಾ ಮಕ್ಕಳೂ ಸಹಾ ತುಂಭಾ ಬುದ್ದವಂತರಿದ್ದಾರೆ ಈ ಶಾಲೆಯ ಶಿಕ್ಷಕರುಗಳಾದ ಪ್ರೇಮ ಮತ್ತು ಪಿ.ಹೆಚ್.ಸುರೇಶ್ ಇವರುಗಳಿಗೆ ಕೃತಜ್ಞತೆಗಳನ್ನ ಸಲ್ಲಿಸಬೇಕು ಎಂದರು.

ಮಕ್ಕಳಿಗೆ ಅಷ್ಟೊಂದು ಚೆನ್ನಾಗಿ ಪಾಠ ಪ್ರವಚನಗಳನ್ನ ಮಾಡಿದ್ದಾರೆ ಜೋತೆಗೆ ಶ್ಲೋಕಗಳನ್ನ ಕಲಿಸಿದ್ದಾರೆ.ದೋಡ್ಡ ದೊಡ್ಡ ಸಾಧನೆ ಮಾಡಿರುವ ಎಲ್ಲಾ ಮಹನೀಯರು ಕೂಡ ಇಂತಹ ಸರ್ಕಾರಿ ಶಾಲೆಯಲ್ಲೆ ಓದಿ ಯಶಸ್ಸು ಕಂಡಿದ್ದು ಎಂದು ಅರ್ಥೈಸಿದರು.



ಸದ್ಗುರು ಸಂಸ್ಥೆಯ ಮಾಲಿಕ ಯುವ ಉದ್ಯಮಿ ಡಿ.ಎಸ್.ಪ್ರದೀಪ್ ಮಾತನಾಡಿ ಸರ್ಕಾರಿ ಶಾಲೆಗಳಲ್ಲ ಓದಿ ಸರ್ಕಾರಿ ಹುದ್ದೆಗಳಿಗೆ ಹೋಗಬೇಕು ಈ ನಿಟ್ಟಿನಲ್ಲಿ ಮಕ್ಕಳ ವಿದ್ಯಾಭ್ಯಾಸದ ಸಲುವಾಗಿ ಅವರಿಗೆ ನಮ್ಮ ಸದ್ಗುರು ಪೌಂಡೇಷನ್ ವತಿಯಿಂದ ಶಾಲೆಗಳಿಗೆ ಸಹಾಯ ಮಾಡುತ್ತೇನೆ ಎಂಬ ಭರವಸೆಯನ್ನ ನೀಡಿದರು.

ಕಾರ್ಯಕ್ರಮದಲ್ಲಿ ಇಸಿಓ ಶಶಿಧರ,ಸರ್ಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರ ಸಂಘದ ನಿರ್ದೇಶಕ ಮಂಜುನಾಥ್,ಶಾಲೆಯ ಮುಖ್ಯ ಶಿಕ್ಷಕಿ ಪ್ರೇಮ, ಎಸ್.ಡಿ.ಎಂ.ಸಿ ಅಧ್ಯಕ್ಷೆ ಕೆ.ಪ್ರೇಮ, ಕಲಾವತಿ ಸೇರಿದಂತೆ ಎಸ್.ಡಿ.ಎಂ.ಸಿ ಸದಸ್ಯರುಗಳು, ಸರ್ಕಾರಿ ನೌಕರರು ಹಾಗೂ ಶಾಲಾ ಶಿಕ್ಷಕರು, ಸಿಬ್ಬಂಧಿವರ್ಗ,ಶ್ರೀ ಭಗೀರಥ ಹಿರಿಯ ವಿದ್ಯಾರ್ಥಿಗಳ ಸಂಘ ಹಾಗೂ ಮಕ್ಕಳ ಪೋಷಕರು ಸೇರಿದಂತೆ ಗ್ರಾಮದ ಗ್ರಾಮಸ್ಥರುಗಳು ಭಾಗವಹಿಸಿದ್ದರು.ಇದೇ ಸಂಧರ್ಬದಲ್ಲಿ ಗ್ರಾಮದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರದ ನಂತರ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

### ಮಹಾಲಕ್ಷ್ಮಿ ದೇವಸ್ಥಾನ ಪ್ರತಿಷ್ಠಾಪನೆ: ಪೌರಕಾರ್ಮಿಕರಿಗೆ ಅಭಿನಂದನೆ



» ಚಳ್ಳಕೆರೆ

ಇಲ್ಲಿನ ಶಿವನಗರದಲ್ಲಿ ಕಳೆದವಾರ ಶ್ರೀಮಹಾಲಕ್ಷ್ಮಿ ದೇವಸ್ಥಾನ ಪ್ರತಿಷ್ಠಾಪನಾ ಕಾರ್ಯಕ್ರಮ ಮೂರು ದಿನಗಳ ಕಾಲ ಯಶಸ್ವಿಯಾಗಿ ನಡೆದಿದ್ದು, ಸಾವಿರಾರು ಭಕ್ತರು ಪ್ರತಿಷ್ಠಾಪನೆ ಹಾಗೂ ಪೂಜಾ ಕಾರ್ಯದಲ್ಲಿ ಪಾಲ್ಗೊಂಡರು. ದೇವಸ್ಥಾನ ಪ್ರತಿಷ್ಠಾಪನಾ ಕಾರ್ಯಕ್ರಮದ ಸಂದರ್ಭದಲ್ಲಿ ಸ್ವಚ್ಚತೆಯನ್ನು ಅಚ್ಚುಕಟ್ಟಾಗಿ ನೆರವೇರಿಸಿದ ನಗರಸಭೆಯ ಪೌರಕಾರ್ಮಿಕ ವರ್ಗಕ್ಕೆ ದೇವಸ್ಥಾನ ಆಡಳಿತಮಂಡಳಿ ಸ್ವಚ್ಚತಾ ಹಿನ್ನೆಲೆಯಲ್ಲಿ ಅವರನ್ನು ಅಭಿನಂದಿಸಿದರು. ಸಮಿತಿಯ ಗೌರವಾಧ್ಯಕ್ಷ ಟಿ.ಪ್ರಭುದೇವ್ ಮಾತನಾಡಿ, ಯಾವುದೇ ರೀತಿಯ ಕಾರ್ಯಕ್ರಮವಿರಲಿ ಇಲ್ಲಿನ ನಗರಸಭೆ ಸಿಬ್ಬಂದಿ ದಕ್ಷತೆ, ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತಾರೆ. ದೇವಸ್ಥಾನ ಪ್ರತಿಷ್ಠಾಪನಾ ಸಂದರ್ಭದಲ್ಲೂ ದೇವಸ್ಥಾನ ಆವರಣವೂ ಸೇರಿದಂತೆ ಈ ಭಾಗದ ಎಲ್ಲಾ ರಸ್ತೆ ಹಾಗೂ ಚರಂಡಿಗಳನ್ನು ಸ್ವಚ್ಚಗೊಳಿಸಿ ಪರಿಸರವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದಾರೆ. ನಗರಸಭೆಯ ಸಿಬ್ಬಂದಿ ವರ್ಗ ಉತ್ತಮ ಕೆಲಸ ನಿರ್ವಹಿಸಿದ್ದು, ದೇವಸ್ಥಾನದ ಆಡಳಿತಮಂಡಳಿಯಿಂದ ಗೌರವಿಸಲಾಗಿದೆ ಎಂದರು. ಅಧ್ಯಕ್ಷ ಎಚ್.ಎಸ್.ನಾಗರಾಜು, ಸಂಚಾಲಕ ಬಿ.ಸಿ.ಸಂಜೀವಮೂರ್ತಿ, ಉಪಾಧ್ಯಕ್ಷ ಎ.ವಿಜಯೇಂದ್ರ,ಟಿ. ಆರ್.ಪಾಂಡುರಂಗ, ಕಾರ್ಯದರ್ಶಿ ಎ.ಎಸ್.ಕುಮಾರ್, ಸಹ ಕಾರ್ಯದರ್ಶಿ ಸುಮನಕೋಟೇಶ್ವರ್, ಧನಲಕ್ಷ್ಮಿ ಲೋಕೇಶ್, ಖಜಾಂಚಿ ಕೆ.ಪಿ.ನಾಗಭೂಷಣಶೆಟ್ಟಿ, ನಿರ್ದೇಶಕರಾದ ವೆಂಕಟನಾರಾಯಣ, ಕೆ.ಟಿ.ಬಾಬು, ಜಿ.ಆರ್.ಬಾಲಾಜಿ, ನಗರಸಭೆ ಆರೋಗ್ಯ ನಿರೀಕ್ಷಕಿ ಗೀತಾಕುಮಾರಿ ಮುಂತಾದವರು ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

# ಹಲ್ಲೆ: ಆರೋಪಿಗಳ ಗಡಿಪಾರು ಮಾಡುವಂತೆ ಮನವಿ

» ಚಿತ್ರದುರ್ಗ

ಹಿರಿಯೂರು ಗ್ರಾಮಾಂತರ ಪೋಲಿಸ್ ಠಾಣೆ ವ್ಯಾಪ್ತಿಯ ತಾಲ್ಲೂಕಿನ ಕೆ.ಆರ್. ಹಳ್ಳಿ ಗೇಟ್ ಸಮೀಪದ ಡಾಬಾದ ಬಳಿ ನಡೆದಿರುವ ಹಲ್ಲೆಗೆ ಸಂಬಂಧಿಸಿದಂತೆ ಅರೋಪಿಗಳನ್ನು ಬಂಧಿಸಿ, ಅವರ ಮೇಲೆ ರೌಡಿ ಶೀಟ್ ಜಾರಿ ಮಾಡಿ ಅವರನ್ನು ಗಡಿಪಾರು ಮಾಡುವಂತೆ ಜಿಲ್ಲಾಡಳಿತ ಹಾಗೂ ಜಿಲ್ಲಾ ರಕ್ಷಣಾಧಿಕಾರಿಗಳನ್ನು ಬಂಜಾರ ಸಮಾಜದ ಅಧ್ಯಕ್ಷರಾದ ಎಂ.ಸತೀಶ್ ಕುಮಾರ್ ಆಗ್ರಹಿಸಿದ್ದಾರೆ.

ಈ ಬಗ್ಗೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ರಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ 18 ರ ರಾತ್ರಿ ಸಮಯದಲ್ಲಿ ಹಿರಿಯೂರು ಗ್ರಾಮಾಂತರ ಪೋಲಿಸ್ ಠಾಣೆ ವ್ಯಾಪ್ತಿಯ ತಾಲ್ಲೂಕಿನ ಕೆ.ಆರ್.ಹಳ್ಳಿ ಗೇಟ್ ಸಮೀಪದ ಡಾಬಾದ ಬಳಿ ಸುರೇಶ್, ಸತೀಶ್ ಪ್ರಕಾಶ್, ಪಾರ್ಥ ಶಿವರಾಜ್ ಸೇರಿದಂತೆ ಇತರೆ 10 ರಿಂದ 15 ಜನ ಗುಂಪು ಕಟ್ಟಿಕೊಂಡು ಬಂದು ಸೂರ್ಯಕುಮಾರನಾಯ್ಕ್, ಶಶಿಕುಮಾರ್ ನಾಯ್ಕ್ ಇವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಕಬ್ಬಿಣದ ರಾಡ್ ಹಾಗೂ ಕೋಲಿನಿಂದ ಕೈಕಾಲುಗಳಿಂದ ಹಲ್ಲೆ ಮಾಡಿದ್ದಲ್ಲದೆ, ನಿಮ್ಮ ಪ್ರಾಣವನ್ನು ತೆಗೆಯುತ್ತೇವೆ, ಎಂದು ಜಾತಿ ನಿಂದನೆ ಮಾಡಿದ್ದಾರೆ. ಇವರ ಬಗ್ಗೆ ಪೋಲಿಸ್ ಠಾಣೆಯಲ್ಲಿ ದೂರು ದಾಖಲಾಗಿ ಎಫ್.ಐ.ಆರ್ ಆಗಿದ್ದರು ಸಹಾ ಇದುವರೆವಿಗೂ ಸಹಾ ಯಾವ ಆರೋಪಿಗಳನ್ನು ಸಹಾ ಪೋಲಿಸರು ಬಂಧಿಸಿಲ್ಲ ಎಂದು ದೂರಿದ್ದಾರೆ.





ನಮ್ಮಸಮುದಾಯವದವರಮೇಲೆಹಲ್ಲೆ ನಡೆಸಿದವರು ಮೇಲ್ಜಾತಿಯವರಾಗಿದ್ದು, ಬಲಾಢ್ಯರಾಗಿದ್ದಾರೆ ಎಂಬ ಕಾರಣಕ್ಕೆ ಅವರನ್ನು ಇದುವರೆವಿಗೂ ಅವರನ್ನು ಬಂಧಿಸಿಲ್ಲ, ನಮ್ಮ ಸಣ್ಣ ಸಮುದಾಯವರನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ ನಮ್ಮಂತಹ ಸಮುದಾಯಕ್ಕೆ ರಕ್ಷಣೆಯನ್ನು ನೀಡಬೇಕಾದ ಪೋಲಿಸರು ಆರೋಪಿಗಳನ್ನು ಬಂಧಿಸುವಲ್ಲಿ ತಾತ್ಸಾರ ಮಾಡುತ್ತಿದ್ದಾರೆ. ಇವರು ನಮ್ಮ ಸಮುದಾಯವರ ಮೇಲೆ ಹಲ್ಲೆ ಮಾಡಿದ್ದು ಬೈದದ್ದು ನಮ್ಮ ಬಳಿ ವಿಡಿಯೋ ಇದ್ದರು ಸಹಾ ಪೋಲಿಸರು ಅವರನ್ನು ಬಂಧಿಸಿಲ್ಲ. ಈ ಕೂಡಲೇ ಅವರನ್ನು ಬಂಧಿಸಬೇಕು ಇದಕ್ಕೆ ಪ್ರೇರಣೆ ನೀಡಿದವರನ್ನು ಸಹಾ ಪತ್ತೇ ಮಾಡಿ ಅವರ ಮೇಲೆ ರೌಡಿ ಶೀಟ್ ಹಾಕಿ ಜಿಲ್ಲೆಯಿಂದ ಗಡಿಪಾರು ಮಾಡುವಂತೆ ಜಿಲ್ಲಾಧಿಕಾರಿಗಳನ್ನು ಹಾಗೂ ಜಿಲ್ಲಾರಕ್ಷಣಾಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ಕೆ.ಆರ್.ಹಳ್ಳಿ ಗೇಟ್ ಸಮೀಪದ ವೈಷ್ಣವಿ ಹಾಗೂ ಸಹರಾ ಡಾಬಾವಿದ್ದು, ಇದರಲ್ಲಿ ವೈಷ್ಣವಿ ಡಾಬಾ ಮಾಲಿಕರಾದ ಸುರೇಶ್ ಪಕ್ಕದ ಸಹರಾ ಡಾಬಾದವರ ಮೇಲೆ ಹಲ್ಲೆಯನ್ನು ಮಾಡಿದ್ದು ಇವರನ್ನು ಕೊಲೆ ಮಾಡುವ ಉದ್ದೇಶದಿಂದಲೇ ವಿನಾ ಕಾರಣ ಜಗಳವನ್ನ ತೆಗೆದು ಇವರ ಮೇಲೆ ಹಲ್ಲೆಯನ್ನು ನಡೆಸಿದ್ದಾರೆ. ಇದ್ದಲ್ಲದೆ ಇಲ್ಲಿ ಹೋಟೇಲ್ ನಡೆಸಲು ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆಯನ್ನು ಹಾಕಿದ್ದಾರೆ. ಈ ಹಿನ್ನಲೆಯಲ್ಲಿ ಇವರನ್ನು ಕೂಡಲೇ ಬಂಧಿಸಿ ಕಾನೂನು ರೀತಿಯಲ್ಲಿ ಶಿಕ್ಷೆಯನ್ನು ಕೂಡಿಸುವಂತೆ ಇಬ್ಬರಲ್ಲಿ ಸತೀಶ್ ಕುಮಾರ್ ಮನವಿ ಮಾಡಿದ್ದಾರೆ.





# ದೋಷಪೂರ್ಣ ಮಕ್ಕಳ ವ್ಯಕ್ತಿತ್ವ ಸರಿಪಡಿಸಲು, ಮೊದಲು ಪೋಷಕರಿಗೆ ಬೇಕಿದೆ ಜ್ಞಾನೌಷಧ

ಜೀವನದಲ್ಲಿ ಎಂತಹ ಕಷ್ಟಗಳೇ ಇರಲಿ, ಸವಾಲುಗಳೇ ಇರಲಿ. ಮೌಲ್ಯವಿಲ್ಲದ ಜೀವನ ಉಪ್ಪಿಲ್ಲದ ಊಟದಂತೆ ಸಪ್ಪೆ; ಅದು ಜೀವನವನ್ನು ಸುಂದರವಾಗಿ ರೂಪಿಸದು! ಆದ್ದರಿಂದ, ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿಯೇ ಸಂಸ್ಕಾರ ಕಲಿಸಬೇಕು. ಮಕ್ಕಳನ್ನು ಸರಿಯಾದ ಕ್ರಮದಲ್ಲಿ ಬೆಳೆಸಲು ಪೋಷಕರಿಗೆ ಸಂಸ್ಕಾರಯುತ ಬದುಕಿನ ತಿಳುವಳಿಕೆ ಅಗತ್ಯತೆಯಿದೆ.*

ಮಕ್ಕಳಿಗೆ ಬಾಲ್ಯದಲ್ಲಿ ದೊಡ್ಡವರು ಹೇಳುವ ನೀತಿ ಕಥೆಗಳು ತಮ್ಮದೇ ಆದ ಕಲ್ಪನಾ ಲೋಕವನ್ನು ಸೃಷ್ಟಿಸಿ ಬಿಡುತ್ತದೆ. ಮಗುವಿನ 'ಶೃತಿ ಪಟಲ' ದ ಮೂಲಕ ಹಾದು 'ಸ್ಮೃತಿ ಪಟಲ' ದಲ್ಲಿ ಬೇರೂರು ವಂತ ಶಕ್ತಿ ನೀತಿಕಥೆಗಳಿಗಿದೆ.ಆದರೆ,ರಾತ್ರಿಮಲಗುವಾಗಅಮ್ಮ-ಅಜ್ಜಿ ಕಥೆ ಹೇಳುತ್ತಾ ಮಕ್ಕಳನ್ನು ತಮ್ಮ ತೊಡೆಯ ಮೇಲೆ ಮಲಗಿಸಿಕೊಳ್ಳುತ್ತಿದ್ದ ಪರಿಪಾಠವೇ ಈಗ ಬಹುತೇಕ ಕಮ್ಮಿಯಾಗಿದೆ. ಚಿಕ್ಕ ವಯಸ್ಸಿನಲ್ಲಿಯೇ ಮಕ್ಕಳಿಗೆ ನೀತಿ ಕಥೆ, ಮೌಲ್ಯಧಾರಿತ ಶಿಕ್ಷಣವನ್ನು ನೀಡಿದ್ದರೆ, ನೀತಿಗೆ ಹೊರತಾದ ವರ್ತನೆ/ ಧೋರಣೆ ತಮ್ಮಿಂದ ವ್ಯಕ್ತವಾದಾಗಲೆಲ್ಲಾ ' ನಾವು ನಡೆದುಕೊಳ್ಳುತ್ತಿರುವುದು ತಪ್ಪು ಎಂಬ ಭಾವನೆ ಮಕ್ಕಳಲ್ಲಿ ಮೂಡುತಿತ್ತು.

ಇತ್ತೀಚಿನ ದಿನಮಾನಗಳಲ್ಲಿ ಶಾಲೆ-ಕಾಲೇಜುಗಳಲ್ಲಿ ಮೌಲ್ಯಯುತ ಶಿಕ್ಷಣ ದೂರದ ಮಾತು ಬಿಡಿ! ಬಹಳಷ್ಟು ಶಾಲೆಗಳಲ್ಲಿ ನಿಗದಿತ ವಿಷಯಕ್ಕೆ ಶಿಕ್ಷಕರೇ ಇಲ್ಲದಿರುವಾಗ, ಇನ್ನೂ ನೀತಿ ಕಥೆ ಹೇಳುವವರನ್ನು ಕಾಣಲು ಸಾಧ್ಯವೇ? ಇಂದಿನ ಪಠ್ಯಪುಸ್ತಕಗಳಲ್ಲಿ ಅಳವಡಿಸಲಾಗಿರುವ ಪಾಠಗಳ ಬಗ್ಗೆಯೇ ವಾದ-ವಿವಾದ ನಡೆಯುತ್ತಿರುವಾಗ, ಮೌಲ್ಯಶಿಕ್ಷಣದ ಪಠ್ಯಕ್ರಮದಲ್ಲಿ ಎಂತಹ ವಿಷಯಗಳನ್ನು ಇಡಬೇಕೆಂಬುದೇ ದೊಡ್ಡ ಸವಾಲಾಗಿ ಪರಿಣಮಿಸಿದೆ. ಮೌಲ್ಯ ಶಿಕ್ಷಣವನ್ನು ನೀಡುವವರನ್ನು ಹುಡುಕುವುದು ಹೇಗೆ? ನಿಯೋಜನೆ ಮಾಡುವುದಾದರೂ ಹೇಗೆ? ಶಿಕ್ಷಣ ನೀಡುವ ಶಿಕ್ಷಕನ ಜೀವನದಲ್ಲಿ ಮೌಲ್ಯಗಳಿರಬೇಕಲ್ಲವೇ? ಅಂತಹ ಶಿಕ್ಷಕನನ್ನು ಆಯ್ಕೆ ಹೇಗೆ ಎಂಬುದು ಕಾಡದೆ ಬಿಡದು. ಇತ್ತೀಚಿನ ದಿನಗಳಲ್ಲಿ ಮೌಲ್ಯಕ್ಕಿಂತ, ವಿಷಯವಾರು ಗಳಿಸಬೇಕಾದ ಅಂಕಗಳಿಗೆ ಅನಿವಾರ್ಯವಾಗಿ ಪ್ರಾಧ್ಯಾನತೆ ನೀಡುತ್ತಿರುವ ದಿನಮಾನಗಳಲ್ಲಿ ನೀತಿ ಶಿಕ್ಷಣದಿಂದ ಮಕ್ಕಳು ಉತ್ತಮ ನಾಗರಿಕರಾಗಲಿ ಎಂದು ಹಂಬಲಿಸುವ ಪೋಷಕರು ತುಂಬಾ ವಿರಳ.

ಇತ್ತೀಚಿಗೆ, ನಮ್ಮ ಮನೆಯ ಮಕ್ಕಳಿಗೆ ಪ್ರೋತ್ಸಾಹಿಸುತ್ತಿದ್ದೇವೆಯೇ ವಿನಃ ಮನೆಯಲ್ಲಿ, ಹೊರಗಿನ ಸಮಾಜದಲ್ಲಿ, ಗುರು-ಹಿರಿಯರೊಂದಿಗೆ ಹೇಗೆ ಮಾತನಾಡಬೇಕು, ವರ್ತಿಸಬೇಕು, ವ್ಯವಹಾರಿಸಬೇಕೆಂದು ಹೇಳಿಕೊಡುವಲ್ಲಿ ಹಿಂದೆ ಬಿದ್ದಿದ್ದೇವೆ. ಇಲ್ಲಿ ತಪ್ಪಾಗುತ್ತಿರುವುದು ಹಿರಿಯರಿಂದಲೇ ಹೊರತು, ಮಕ್ಕಳಿಂದಲ್ಲ. ಮಗುವಿಗೆ ಮೌಲ್ಯಧಾರಿತ ಶಿಕ್ಷಣ ನೀಡುವತ್ತ ಅದಕ್ಕೆ ಪೂರಕ ವಾತಾವರಣ ಕಲ್ಪಿಸುವಂತಹ ಉತ್ಸಾಹ ತೋರುತ್ತಿಲ್ಲ. ನಮ್ಮ ಮನೆಯ ಮಗು ಬೇರೆ ಮನೆಯ ಮಗುವಿಗಿಂತ ಹೆಚ್ಚು ಅಂಕ ಗಳಿಸಬೇಕೆಂಬ ಹೈಪೋಟಿಗೆ ಬಿದ್ದು, ಮಗುವಿನ ಮೇಲೆ ನಿರಂತರ ಒತ್ತಡ ಹೇರುವ ಪ್ರಯತ್ನ ಪೋಷಕರಿಂದ ನಡೆಯುತ್ತಲೇ ಇದೆ. ವಾಸ್ತವವಾಗಿ ಮಗು ಬಾಲ್ಯದಲ್ಲಿ ತಮ್ಮ ಸುತ್ತಲ ಪರಿಸರ, ಪೋಷಕರ ನಡವಳಿಕೆಯಿಂದಲೇ ಸಾಕಷ್ಟು ವಿಷಯವನ್ನು ಕಲಿಯುತ್ತದೆ. ದುರಾದೃಷ್ಟವಶಾತ್ ಅಂತಹ ಪರಿಸರವನ್ನು ಮಗುವಿಗೆ ಬಾಲ್ಯದಲ್ಲಿಯೇ ಕಟ್ಟಿ ಕೊಡುವಲ್ಲಿ ಪೋಷಕರು ಸೋಲುತ್ತಿದ್ದಾರೆ. ಪ್ರೀತಿ, ವಾತ್ಸಲ್ಯ, ದಯೆ, ಪರೋಪಕಾರ, ಕರುಣೆಯಂತಹ ಮಾನವೀಯ ಮೌಲ್ಯಗಳು ಹೇಗೆ ಬದುಕನ್ನು ಶ್ರೀಮಂತ ಗೊಳಿಸುತ್ತವೆ ಎಂಬುದನ್ನೇ ಮರೆತು ಬಿಟ್ಟಂತಿದೆ. ಮೌಲ್ಯಯುತ ಜೀವನ ನಡೆಸುವವರೇ ಅವುಗಳಿಂದ ದೂರ ಸರಿದುಬಿಟ್ಟರೆ, ಮಕ್ಕಳನ್ನು ಅರಿವಿನ ಕೊರತೆ ಮತ್ತು ಅನಾಥಪ್ರಜ್ಞೆ ಕಾಡದೆ ಬಿಡುವುದೇ?

ಬಾಲ್ಯದಲ್ಲಿ ಕೇಳಿದ ನೀತಿ ಕಥೆಗಳು, ಸದಾಶಯದ ಪರಿಕಲ್ಪನೆಗಳು ಹಸಿ ಮಣ್ಣಿನಂತಹ ಮಕ್ಕಳ ಮನಸ್ಸಿನಲ್ಲಿ ಗಟ್ಟಿಯಾಗಿ- ಸ್ಪಷ್ಟವಾಗಿ ಅಚ್ಚೊತ್ತಿ, ಸಕಾರಾತ್ಮಕ ಪರಿವರ್ತನೆಗೆ ಕಾರಣವಾಗುತ್ತದೆ. ನಮಗೆ ತಿಳಿದಂತೆ ಈ ಮೂರು ದಶಕಗಳ ಪೂರ್ವದಲ್ಲಿ ತಂತ್ರಜ್ಞಾನವೂ ನಮ್ಮನ್ನು ಅಷ್ಟಾಗಿ ಬಾಧಿಸಿರಲಿಲ್ಲ; ಆಗ ಜನರು ಮಾನವೀಯ ಸಂಬಂಧಗಳಿಗೆ, ಮೌಲ್ಯಯುತ ಜೀವನಕ್ಕೆ ಬೆಲೆ ಕೊಡುತ್ತಿದ್ದರು. ಮಕ್ಕಳಿಗೆ ಚಿಕ್ಕಂದಿನಿಂದಲೇ ಜೀವನ ಮೌಲ್ಯವನ್ನು ಕಲಿಸುವ ಪರಿಪಾಠವನ್ನು ಕುಟುಂಬದ ಸದಸ್ಯರು ಬೆಳೆಸಿಕೊಂಡಿದ್ದರು. ದಸರಾ/ ಬೇಸಿಗೆ ರಜೆಯ ಸಮಯದಲ್ಲಿ ಸಂಬಂಧಿಕರ ಊರುಗಳಿಗೆ ಹೋದಾಗ, ಅಲ್ಲಿನ ಅಜ್ಜಿ-ಅಜ್ಜಂದಿರಿಂದ ನೀತಿ ಕಥೆಗಳು ಬರುತ್ತಿದ್ದವು. ಮನೆಗಳಲ್ಲಿ ಧಾರ್ಮಿಕ ಪ್ರವಚನ, ರಾಮಾಯಣ, ಮಹಾಭಾರತ, ಪಂಚತಂತ್ರದ ಕಥೆಗಳು, ಚಂದ್ರಮಾಮನ ಕಥೆಗಳು ಕಿವಿಗುಟ್ಟುತ್ತಿದ್ದವು. ಅಂದಿನ ಜನರು ಅದಕ್ಕೆ ಪೂರಕವಾಗುವಂತಹ ವಾತಾವರಣವನ್ನು ಕಲ್ಪಿಸಿಕೊಳ್ಳುತ್ತಿದ್ದರು. ಕೋರ್ಟು-ಕಚೇರಿಗೆ ಅಲೆಯುವುದಕ್ಕಿಂತ ಗ್ರಾಮದ ಹಿರಿಯರ ಸಮ್ಮುಖದಲ್ಲಿಯೇ ಸಮಸ್ಯೆ/ ವ್ಯಾಜ್ಯಗಳು ಪರಿಹಾರವಾಗುತ್ತಿದ್ದವು. ಜನರು ಮಾನವೀಯ ಮೌಲ್ಯಗಳಲ್ಲಿ ನಂಬಿಕೆಯಿಟ್ಟು ಕೊಂಡು ಜೀವನ ಸಾಗಿಸುತ್ತಿದ್ದರು. ಇತ್ತೀಚಿಗೆ, ಪ್ರಾಥಮಿಕ ಹಂತದಲ್ಲಿ ಸಂಸ್ಕಾರವನ್ನು ಹೇಳಿಕೊಡುವುದು ಕೂಡ ದುಸ್ತರವಾಗಿ ಬಿಟ್ಟಿದೆ.

ಜೀವನದಲ್ಲಿ ಎಂತಹ ಕಷ್ಟಗಳು ಇರಲಿ, ಸವಾಲುಗಳೇನೆ ಇರಲಿ, ಮೌಲ್ಯವಿಲ್ಲದ ಜೀವನ ಉಪ್ಪಿಲ್ಲದ ಊಟದಂತೆ ಸಪ್ಪೆ; ಅದು ಜೀವನವನ್ನು ಸುಂದರವಾಗಿ ರೂಪಿಸದು. ಆದ್ದರಿಂದ, ಮಕ್ಕಳಿಗೆ ಪ್ರಾಥಮಿಕ ಹಂತದಿಂದಲೇ ಮನೆಯಲ್ಲಿ ನೀತಿ ಕಥೆಗಳನ್ನು ಹೇಳುವುದರೊಂದಿಗೆ, ಶಾಲೆಯಲ್ಲಿ ಸಂಸ್ಕಾರಯುತ/ ಮೌಲ್ಯಧಾರಿತ ಶಿಕ್ಷಣಕ್ಕೆ ಒತ್ತು ನೀಡಬೇಕು. ಅಲ್ಲದೇ, ಅಂತಹ ವಿಶೇಷ ತರಗತಿಗಳನ್ನು ಕಡ್ಡಾಯಗೊಳಿಸಬೇಕು. ಕ್ರಿಯಾಶೀಲ ಚಟುವಟಿಕೆಗಳಿಗೂ ಅವಕಾಶ ಕಲ್ಪಿಸಬೇಕು. ತಾಯಿ ಭಾಷೆಯ ಚಿತ್ತಾಕರ್ಷಕ ಚಿತ್ರಗಳೊಂದಿಗಿನ ನೀತಿ ಕಥೆ ಪುಸ್ತಕಗಳು ಮಕ್ಕಳ ಕೈಗೆಟುಕುವಂತಾಗಬೇಕು. ಆಗ ಮಾತ್ರವೇ ಮಕ್ಕಳ ಮನಸ್ಸಿನ ಸ್ಮೃತಿ ಪಟಲದಲ್ಲಿ ದೀರ್ಘಕಾಲ ಉಳಿಯಲು ಸಾಧ್ಯ.

ಗಿಡವಾಗಿ ಬಗ್ಗದ್ದು, ಮರವಾಗಿ ಬಗ್ಗೀತೇ? ಎಂಬ ಗಾದೆ ಮಾತಿದೆ. ಗಿಡವೊಂದು ಸಸಿಯಿದ್ದಾಗಲೇ ಅದರ ಸಹಾಯಕ್ಕೆ ಒಂದು ಕೋಲು ನೆಟ್ಟು, ನೀರೆರೆದು ಪೋಷಿಸಿದಾಗ ನೇರವಾಗಿ ದೊಡ್ಡ ಮರವಾಗಿ ಬೆಳೆದು ನಿಲ್ಲುತ್ತದೆ. ಅದರಂತೆಯೇ, ಪೋಷಕರು ಬಾಲ್ಯದಲ್ಲಿಯೇ ತಮ್ಮ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಮತ್ತು ಜೀವನ ಮೌಲ್ಯಗಳು ಹೇಳಿಕೊಡುವುದರ ಜೊತೆಗೆ ತಮ್ಮ ವರ್ತನೆಯಲ್ಲಿನ ಬದಲಾವಣೆಯನ್ನು ತಾವೇ ಸರಿಪಡಿಸಿಕೊಂಡು ಮಕ್ಕಳ ಬೆಳವಣಿಗೆಗೆ ಸಹಕಾರ ನೀಡುವ ಕಾರ್ಯ ಮಾಡಬೇಕು. ಮಗು ಹುಟ್ಟಿನಿಂದ ಯಾವುದನ್ನು ಕಲಿಯುವುದಿಲ್ಲ. ಪೋಷಕರು ಹಾಗೂ ತನ್ನ ಸುತ್ತಮುತ್ತಲಿನ ಜನರ ನಡೆ-ನುಡಿಗಳು, ವರ್ತನೆಗಳನ್ನು ಅನುಸರಿಸುತ್ತಾ ಬರುತ್ತದೆ. ಪೋಷಕರ ವರ್ತನೆಗಳೇ ದೋಷಪೂರ್ಣವಾಗಿ ಇದ್ದು, ಮಕ್ಕಳ ವರ್ತನೆ ದೋಷ ಮುಕ್ತವಾಗಿ ಇರಲಿ ಎಂಬುವುದು ತಪ್ಪು ಕಲ್ಪನೆಯಲ್ಲವೇ? ಪೋಷಕರು ಮೊದಲು ತಮ್ಮ ವರ್ತನೆಗಳನ್ನು ಸರಿಪಡಿಸಿಕೊಂಡಾಗ, ಸಹಜವಾಗಿಯೇ ಮಕ್ಕಳು ಕೂಡ ತಮ್ಮ ವರ್ತನೆಗಳನ್ನು ಸರಿಪಡಿಸಿಕೊಂಡು ಪೋಷಕರ ಹಾದಿಯಲ್ಲಿಯೇ ಜೀವನಸಾಗಿಸುತ್ತವೆ.

ಗ್ರಾಮೀಣ ಪ್ರದೇಶ ಸೇರಿದಂತೆ ನಗರ ಪ್ರದೇಶಗಳಲ್ಲಿಯೂ ಕೂಡ ಮಕ್ಕಳ ಬೆಳವಣಿಗೆಯ ಕುರಿತಂತೆ ಪೋಷಕರಿಗೆ 3 ತಿಂಗಳಿಗೊಮ್ಮೆಯಾದರೂ ಕಾರ್ಯಗಾರಗಳನ್ನು ಆಯೋಜನೆ ಮಾಡುವ ಅವಶ್ಯಕತೆಬಹುಮುಖ್ಯವಾಗಿದೆ.ಕಾರ್ಯಗಾರಗಳಲ್ಲಿ ಪೋಷಕರುತಮ್ಮಮಕ್ಕಳೊಂದಿಗೆಯಾವರೀತಿಯಾಗಿ ವರ್ತಿಸಬೇಕು, ನಡೆ-ನುಡಿಗಳು ಹೇಗಿರಬೇಕು, ಮಕ್ಕಳು ಮತ್ತು ಪೋಷಕರ ಬಾಂಧವ್ಯ ಹೇಗಿರಬೇಕು. ಮಕ್ಕಳ ಆರೋಗ್ಯವನ್ನು ಉತ್ತಮವಾಗಿಡುವ ಕ್ರಮಗಳೇನು? ಅವರ ಅಭಿರುಚಿಗೆ ತಕ್ಕಂತೆ ಪೋಷಕರ ಸಹಕಾರ ಹೇಗಿರಬೇಕೆಂಬ ಇತ್ಯಾದಿ ವಿಷಯಗಳ ಬಗ್ಗೆ ಮಾಹಿತಿ ನೀಡಬೇಕಿದೆ. ಆದಾಗ, ಪೋಷಕರಲ್ಲಿಯೂ ಕೂಡ ಮಕ್ಕಳನ್ನು ಯಾವ ಕ್ರಮದಲ್ಲಿ ಬೆಳೆಸಬೇಕೆಂಬ ಆಲೋಚನೆ ಬೆಳೆಯುತ್ತ ಹೋಗುತ್ತದೆ. ಬಾಲ್ಯದಲ್ಲಿ ಮಕ್ಕಳ ಎಳೆ ಮನಸ್ಸು ಹಸಿ ಮಣ್ಣಿನ ಗೋಡೆಯಂತಿರುತ್ತದೆ. ಆ ಘಟ್ಟದಲ್ಲಿ ಒಳ್ಳೆಯ ಬೀಜಗಳನ್ನು ಬಿತ್ತಿದರೆ, ಭವಿಷ್ಯದಲ್ಲಿ ಉತ್ತಮ ನಾಗರಿಕರಾಗಿ ಹೊರಹೊಮ್ಮುತ್ತಾರೆ.

ಮಕ್ಕಳು ದೊಡ್ಡವರಾದಂತೆ ಬದಲಾಗಿಬಿಟ್ಟಿದ್ದಾರೆ. ನಮ್ಮ ಜೊತೆ ಮಾತುಗಳೇ ಕಡಿಮೆಯಾಗಿವೆ. ನಮ್ಮ ಮಾತುಗಳಿಗೆ ಬೆಲೆಯೇ ಇಲ್ಲದಾಗಿದೆ. ಅವರಿಗಾಗಿ ನಮ್ಮ ಜೀವನವನ್ನೇ ಮುಡಿಪಿಟ್ಟು ಅವರ ಭವಿಷ್ಯವನ್ನು ರೂಪಿಸಿದ್ದೇವೆ. ನಮ್ಮ ಕೊನೆಗಾಲದಲ್ಲಿ ನಮಗೆ ಆಧಾರವಾಗಿ ಇರುತ್ತಾರೆ ಎಂದುಕೊಂಡಿದ್ದೆವು. ಆದರೆ, ನಮ್ಮನ್ನವರು ನೆನಪು ಮಾಡಿಕೊಳ್ಳದಷ್ಟು ತಮ್ಮ ಜೀವನ, ಸಂಸಾರದಲ್ಲಿ ಮೈಮರೆತು ಹೋಗಿದ್ದಾರೆ. ಇದು ಅದೆಷ್ಟೋ ವಯಸ್ಸಾದ ತಂದೆ-ತಾಯಿಗಳ ಬೇಸರದ ಮಾತುಗಳಾಗಿವೆ. ವಯಸ್ಸಾದ ತಂದೆ-ತಾಯಿಗಳನ್ನು ವೃದ್ಧಾಶ್ರಮಕ್ಕೆ ಸೇರಿಸುವ ಮಕ್ಕಳ ಸಂಖ್ಯೆ ಕಡಿಮೆ ಇದೆಯೇ? ಹಣಕ್ಕಾಗಿ ಹೆತ್ತ ತಾಯಿಯ ಅಂತ್ಯಸಂಸ್ಕಾರಕ್ಕೆ ಮಕ್ಕಳೇ ಬಾರದಿರುವಂತಹ ಅಮಾನವಿ ಘಟನೆಗಳು ನಮ್ಮ ಕಣ್ಣಮುಂದಿವೆ. ಬಾಲ್ಯದಲ್ಲಿಯೇ ಮಕ್ಕಳನ್ನು ಸರಿಯಾದ ಕ್ರಮದಲ್ಲಿ ತಿದ್ದಿ-ತೀಡಿ ಬೆಳೆಸಿದ್ದರೆ, ಮುಪ್ಪಿನಲ್ಲಿ ಸಂತೋಷ-ನೆಮ್ಮದಿಯಿಂದ ಬದುಕಬಹುದಿತ್ತು. ಇಷ್ಟಕ್ಕೆಲ್ಲ ಕಾರಣ ಪೋಷಕರ ದೋಷವೇ ಅಲ್ಲವೇ? ಹಾಗಾಗಿ, ದೋಷಪೂರ್ಣ ಮಕ್ಕಳನ್ನು ಸರಿಪಡಿಸಲು ಮೊದಲು, ಪೋಷಕರಿಗೆ ಬೇಕಿದೆ ಜ್ಞಾನೌಷಧ.



» ಲೇಖನ
ಪಿ.ಟಿ.ಸಿದ್ದೇಶ್ ಲಕ್ಕಿಹಳ್ಳಿ,
ಪತ್ರಕರ್ತರು ಮತ್ತು
ಹವ್ಯಾಸಿ ಬರಹಗಾರರು,
ಹೊಸದುರ್ಗ ಮೊ:
7760032964

## ಜಿಲ್ಲಾಮಟ್ಟದ ದೈಹಿಕ ಶಿಕ್ಷಕರ ಸಂಘದ ಕ್ರೀಡಾಕೂಟದ ಪಥಸಂಚಲನ: ಚಳ್ಳಕೆರೆ ಸಂಘಕ್ಕೆ ಪ್ರಥಮ ಬಹುಮಾನ



**ಚಳ್ಳಕೆರೆ:** ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷಕರ ಕ್ರೀಡಾಕೂಟ ಓನಕೆ ಓಬವ್ವಕ್ರೀಡಾಂಗಣದಲ್ಲಿ ನಡೆದಿದ್ದು, ಪಥಸಂಚಲನೆಯಲ್ಲಿ ಚಳ್ಳಕೆರೆ ತಾಲ್ಲೂಕಿನ ದೈಹಿಕ ಶಿಕ್ಷಕರ ಸಂಘ ಪ್ರಥಮ ಸ್ಥಾನಗಳಿಸಿದೆ ಎಂದು ತಾಲ್ಲೂಕು ದೈಹಿಕ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಶ್ರೀರಾಮನಾಯಕ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಪ್ರತಿವರ್ಷದಂತೆ ಈ ವರ್ಷವೂ ದೈಹಿಕಶಿಕ್ಷಕರ ಸಂಘದ ವತಿಯಿಂದ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಏರ್ಪಡಿಸಿದ್ದು, ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ನಡೆದ ಪಥಸಂಚಲನದಲ್ಲಿ ಚಳ್ಳಕೆರೆ ತಾಲ್ಲೂಕು ಸಂಘಕ್ಕೆ ಪ್ರಥಮ ಸ್ಥಾನ ದೊರಕಿದೆ ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಸೇರಿದಂತೆ ಎಲ್ಲಾ ಅಧಿಕಾರಿ ವರ್ಗದವರು ಅಭಿನಂದಿಸಿದ್ದಾರೆ.

## ಕೂಡಲಸಂಗಮೇಶ್ವರ ಅಭಿವೃದ್ದಿ ಕಾಮಗಾರಿ ಶೀಘ್ರ ಅನುಷ್ಠಾನ

**ಚಳ್ಳಕೆರೆ:** ತಾಲ್ಲೂಕಿನ ನಾಗಗೊಂಡನಹಳ್ಳಿ ಶ್ರೀಕೂಡಲಸಂಗಮೇಶ್ವರಸ್ವಾಮಿದೇವಸ್ಥಾನವನ್ನು ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಗೆ ಸೇರಿಸಿ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಮಾ.20ರಂದು ರೈತ ಸಂಘದ ಹಿರಿಯಉಪಾಧ್ಯಕ್ಷ ಕೆ.ಪಿ.ಭೂತಯ್ಯ ಅಧ್ಯಕ್ಷತೆಯನ್ನು ಪ್ರತಿಭಟನೆ ನಡೆಸಿದರು.



ಪ್ರತಿಭಟನಕಾರರನ್ನು ಉದ್ದೇಶಿಸಿ ಮಾತನಾಡಿದ ಕೆ.ಪಿ.ಭೂತಯ್ಯ, ಕಳೆದ ಸೆಪ್ಟಂಬರ್ ಮಾಹೆಯಲ್ಲಿ ಕ್ಷೇತ್ರದ ಶಾಸಕ, ಜಿಲ್ಲಾಧಿಕಾರಿಗಳು ಭಾಗವಹಿಸಿದ್ದ ಸಭೆಯಲ್ಲಿ ಈ ಕ್ಷೇತ್ರವನ್ನು ಅಭಿವೃದ್ದಿ ಪಡಿಸುವ ಕುರಿತು 2.70 ಕೋಟಿಹಣವನ್ನು ಬಿಡುಗಡೆಗೊಳಿಸುವುದಾಗಿ ಭರವಸೆ ನೀಡಲಾಗಿತ್ತು. ಆದರೆ, ಈ ಬಗ್ಗೆ ಜಿಲ್ಲಾಡಳಿತ ಯಾವುದೇ ಕ್ರಮಕೈಗೊಂಡಿಲ್ಲ, ಈ ಹಿನ್ನೆಲೆಯಲ್ಲಿ ಪ್ರತಿಭಟನೆ ನಡೆಸಲಾಗುತ್ತಿದೆ. ಜಿಲ್ಲಾಡಳಿತ ಈಗಲಾದರೂ ದೇವಸ್ಥಾನ ಅಭಿವೃದ್ದಿಗೆ 2.70ಲಕ್ಷ, ಸಣ್ಣನೀರಾವರಿ ಇಲಾಖೆಯಿಂದ 2 ಕೋಟಿ, ಗ್ರಾಮ ಪಂಚಾಯಿತಿಯಿಂದ 40 ಲಕ್ಷ, ಶಾಸಕರೂ ಸಹ ಕೂಡಲಸಂಗಮೇಶ್ವರ ದೇವಸ್ಥಾನದ ಅಭಿವೃದ್ದಿಗೆ ಅನುದಾನ ನೀಡಬೇಕೆಂದು ಒತ್ತಾಯಿಸಿದರು. ಸ್ಥಳಕ್ಕೆ ಭೇಟಿ ನೀಡಿದ್ದ ತಹಶೀಲ್ದಾರ್ ರೇಹಾನ್‌ಪಾಷ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ರವಿಕುಮಾರ್, ಜಿಲ್ಲಾ ಪಂಚಾಯಿತಿ ಇಂಜಿನಿಯರ್ ರಾಮಚಂದ್ರನಾಯ್ಕ, ಕ್ಷೇತ್ರವನ್ನು ಅಭಿವೃದ್ದಿ ಪಡಿಸುವ ಕುರಿತು ಈಗಾಗಲೇ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯೊಂದಿಗೆ ಚರ್ಚೆ ನಡೆಸಿ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸಲಾಗಿದೆ. ಸರ್ಕಾರದಿಂದ ಅನುಮತಿ ದೊರೆತ ಕೂಡಲೇ ಇಲ್ಲಿ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ರಂಜನ್, ಸದಸ್ಯ ಹಂಪಣ್ಣ, ಪಿಡಿಒ ಓಬಣ್ಣ, ಜಿಲ್ಲಾ ರೈತ ಸಂಘದ ಉಪಾಧ್ಯಕ್ಷ ರಾಜಣ್ಣ, ತಾಲ್ಲೂಕು ಅಧ್ಯಕ್ಷ ಹಂಪಣ್ಣ, ಕೂಡಲಸಂಗಮೇಶ್ವರ ಸಮಿತಿಅಧ್ಯಕ್ಷವಾಸುದೇವರೆಡ್ಡಿ,ಶ್ರೀನಿವಾಸ್, ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T